ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 103 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 07–11–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 103 | RNI No: KARKAN/2023/88462 | Chitradurga | Date: 07-11-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಪಿಯು ಫಲಿತಾಂಶ ಸುಧಾರಣೆಯಲ್ಲಿ ಕಾರ್ಯಾಗಾರಗಳು ಪ್ರಮುಖ ಪಾತ್ರ 2
ವಿಜೃಂಭಣೆಯ ಒನಕೆ ಓಬವ್ವ ಜಯಂತಿ ಆಚರಣೆ; ಅಪರ ಜಿಲ್ಲಾಧಿಕಾರಿ 3
ಅಮ್ಮ ಯಾಕೋ ಇಂದು ನೆನಪಾಗಿ ಕಾಡಿದಾಗ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಅನಿಲ್ ಕುಮಾರ್ ಆಯ್ಕೆ



» ನಮ್ಮಜನ ಸಮಾಚಾರ ಹಿರಿಯೂರು

ನಗರಸಭೆ ಸ್ಥಾಯಿ ಸಮಿತಿಯ ಅಧ್ಯಕ್ಷ ಸ್ಥಾನಕ್ಕೆ ಮಂಗಳವಾರ ನಡೆದ ಚುನಾವಣೆಯಲ್ಲಿ 11 ನೇ ವಾರ್ಡ್ ನ ಸದಸ್ಯ ಅನಿಲ್ ಕುಮಾರ್ ರವರು ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಅವಿರೋಧ ಆಯ್ಕೆಯಾದರು. ಪೌರಾಯುಕ್ತ ಎ ವಾಸಿಂ ರವರು ಚುನಾವಣೆ ಕರ್ತವ್ಯ ನಿರ್ವಹಿಸಿದರು. ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷ ಅಜಯ್ ಕುಮಾರ್, ಉಪಾಧ್ಯಕ್ಷೆ ಅಂಬಿಕಾ ಆರಾಧ್ಯ ಹಾಗೂ ನಗರಸಭೆ ಸದಸ್ಯರು ಹಾಜರಿದ್ದರು.

### ಪುರಸಭೆ ಮಾಜಿ ಅಧ್ಯಕ್ಷ ಆರ್ ವೆಂಕಟೇಶ್ ನಿಧನ

» ಹಿರಿಯೂರು



ಪುರಸಭೆ ಮಾಜಿ ಅಧ್ಯಕ್ಷರು ಹಾಗೂ ಅರ್ಬನ್ ಬ್ಯಾಂಕ್ ಮಾಜಿ ಅಧ್ಯಕ್ಷರು ಆಗಿದ್ದ ನಗರದ ಹಿರಿಯ ರಾಜಕಾರಣಿ ಕೆ ಆರ್ ವೆಂಕಟೇಶ್(86) ರವರು ಬುಧವಾರ ನಿಧನರಾಗಿದ್ದಾರೆ. ಮೃತರು ಜಿಲ್ಲಾ ಮಾಜಿ ನಿವೃತ್ತ ಯೋಧರ ಸಂಘದ ಸ್ಥಾಪಕ ಅಧ್ಯಕ್ಷರಾಗಿ,ರೆಡ್ ಕ್ರಾಸ್ ಸಂಸ್ಥೆ ಉಪಾಧ್ಯಕ್ಷರಾಗಿ,ತೇರುಮಲ್ಲೇಶ್ವರ ಸ್ವಾಮಿ ದೇವಾಲಯ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷರಾಗಿ,ಆರ್ಯ ವೈಶ ಮಂಡಳಿ ಗೌರಾವಾಧ್ಯಕ್ಷರಾಗಿ ಹಲವಾರು ವರ್ಷಗಳ ಕಾಲ ಸೇವೆ ಸಲ್ಲಿಸಿದ್ದಾರೆ. ಪತ್ನಿ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಮೃತರು ಅಗಲಿದ್ದಾರೆ.ನಗರದ ಆರ್ಯ ವೈಶ್ಯ ಮುಕ್ತಿಧಾಮದಲ್ಲಿ ಬುಧವಾರ ಸಂಜೆ ಅಂತ್ಯಕ್ರಿಯೆ ನೆರವೇರಿತು.

### ಜಾನುಕೊಂಡ ಗ್ರಾಮ ಪಂಚಾಯತಿ ನೂತನ ಅಧ್ಯಕ್ಷರಾಗಿ ಮಂಜುಳಾ ಸ್ವಾಮಿ ಆಯ್ಕೆ



» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಜಾನುಕೊಂಡ ಗ್ರಾಮ ಪಂಚಾಯತಿಯಲ್ಲಿ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಸಿ ಮಂಜುಳಾರವನ್ನ ಅಧ್ಯಕ್ಷರನ್ನ ಆಯ್ಕೆ ಮಾಡಲಾಗಿದೆ. ಚಿತ್ರದುರ್ಗ ತಾಲೂಕಿನ ಜಾನುಕೊಂಡ ಗ್ರಾಮ ಪಂಚಾಯತಿ ವ್ಯಾಪ್ತಿಯ ಸೊಲ್ಲಾಪುರ ಗ್ರಾಮದ ಸದಸ್ಯರಾದ ಮಂಜುಳಾರವರು ಅಧ್ಯಕ್ಷ ಸ್ಥಾನಕ್ಕೆ ಅರ್ಜಿಯನ್ನ ಸಲ್ಲಿಸಿ ಗ್ರಾಮ ಪಂಚಾಯಿತಿಯ ಒಟ್ಟು ಸದಸ್ಯರ ಬಲದಿಂದ ಗೆದ್ದು ಅಧ್ಯಕ್ಷ ಸ್ಥಾನವನ್ನ ಅಲಂಕರಿಸಿದ್ದಾರೆ. ಗ್ರಾಮ ಪಂಚಾಯಿತಿ ಅಡಿಯಲ್ಲಿ ಬರುವಂತಹ ಹಳ್ಳಿಗಳ ಅಭಿವೃದ್ಧಿ ಕಾರ್ಯಗಳನ್ನ ಕ್ರಮ ಬದ್ಧವಾಗಿ ಹಾಗೂ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಅನುದಾನಗಳನ್ನ ತಂದು ಹಳ್ಳಿಗಳ ಅಭಿವೃದ್ಧಿ ಮಾಡಲಾಗುವುದು ಎಂದು ಮಂಜುಳಸ್ವಾಮಿ ತಿಳಿಸಿದರು.

# ಭದ್ರಾ: 5300 ಕೋಟಿ ರು ಅನುದಾನದಲ್ಲಿ 1754 ಕೋಟಿ ರು ಖೋತ ಆಗುವ ಸಾಧ್ಯತೆ

» ಚಿತ್ರದುರ್ಗ



ಮಧ್ಯ ಕರ್ನಾಟಕದ ಬಯಲು ಸೀಮೆ ಪ್ರದೇಶಗಳಿಗೆ ನೀರುಣಿಸುವ ಮಹತ್ವದ ಭದ್ರಾ ಮೇಲ್ದಂಡೆಗೆ ಯೋಜನೆಗೆ ಕೇಂದ್ರದ ಘೋಷಿತ 5300 ಕೋಟಿ ರು ಅನುದಾನದಲ್ಲಿ 1754 ಕೋಟಿ ರು ಖೋತ ಆಗುವ ಸಾಧ್ಯತೆ ಇದೆ ಎಂದು ಚಿತ್ರದುರ್ಗ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಆತಂಕ ವ್ಯಕ್ತಪಡಿಸಿದೆ.

ಇಲ್ಲಿನ ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಮಿತಿಯ ಜೆ.ಯಾದವರೆಡ್ಡಿ ರಾಜ್ಯ ಸರ್ಕಾರದಿಂದ ವಾರದ ಹಿಂದೆ ಅಂದರೆ ಅಕ್ಟೋಬರ್ 28 ರಂದು ಕೇಂದ್ರ ಜಲಶಕ್ತಿ ಸಚಿವಾಲಯಕ್ಕೆ ಸಲ್ಲಿಕೆಯಾಗಿರುವ ಮರು ಪ್ರಸ್ತಾವನೆ ಈ ಸಂಗತಿಯ ದೃಢಪಡಿಸಿದೆ. ಮರು ಪ್ರಸ್ತಾವನೆಯಲ್ಲಿ3546.22 ಕೋಟಿ ರುಪಾಯಿ ಅನುದಾನದ ನೆರವು ಕೋರಲಾಗಿದೆ. ಹಾಗಾಗಿ ಘೋಷಿತ 5300 ಕೋಟಿ ರು ನಲ್ಲಿ 1754 ಕೋಟಿ ರು ಖೋತವಾಗಲಿದೆ. ಅನುದಾನ ಖೋತವಾಗುವ ಸಂಗತಿಯ ಸಮಿತಿ ಮೊದಲೇ ಗ್ರಹಿಸಿತ್ತು ಎಂದರು.

ಭದ್ರಾ ಮೇಲ್ದಂಡೆಗೆ ಕೇಂದ್ರದ 2023–24 ನೇ ಸಾಲಿನ ಬಜೆಟ್ ನಲ್ಲಿ5300 ಕೋಟಿ ರು ಅನುದಾನ ಘೋಷಣೆ ಮಾಡಲಾಗಿತ್ತು. ಅನುದಾನ ಬಿಡುಗಡೆ ಸಂಬಂಧ ರಾಜ್ಯ ಸರ್ಕಾರ ಕೇಂದ್ರದ ಮೇಲೆ ಒತ್ತಡ ಹಾಕಿತ್ತು. ಏತನ್ಮಧ್ಯೆ ಕಳೆದ ಸೆಪ್ಟಂಬರ್ 5 ರಂದು □□□ಂದ್ರ ಜಲಶಕ್ತಿ ಸಚಿವಾಲಯದ ಕಾರ್ಯದರ್ಶಿ ದೇಬರ್ಶಿ ಮುಖರ್ಜಿ ರಾಜ್ಯ ಸರ್ಕಾರಕ್ಕೆ ಪತ್ರ ಬರೆದು ಅನುದಾನ ಬಿಡುಗಡೆಗೆ ಆಕ್ಷೇಪಣೆ ವ್ಯಕ್ತಪಡಿಸಿ ಕೆಲ ತಾಂತ್ರಿಕ ಮಾಹಿತಿ ಕೋರಿದ್ದರು.

ಭದ್ರಾ ಮೇಲ್ದಂಡೆಗೆ ರಾಜ್ಯ ಸರ್ಕಾರ ಈವರೆಗೆ ಮಾಡಿದ ವೆಚ್ಚ, ಯೋಜನೆ ಪೂರ್ಣಗೊಳಿಸಲು ಬೇಕಾದ ಬಾಕಿ ಮೊತ್ತ, ಭೌಗೋಳಿಕ ಹಂಚಿಕೆ ಹಾಗೂ ಹಣಕಾಸು ಲಭ್ಯತೆ ನೋಡಿಕೊಂಡು ಅನುದಾನ ಬಿಡುಗಡೆ ಮಾಡಲಾಗುತ್ತದೆ ಎಂಬ ಸಂಗತಿಯ ಪತ್ರದಲ್ಲಿ ಉಲ್ಲೇಖಿಸಲಾಗಿತ್ತು.

ಭದ್ರಾ ಮೇಲ್ದಂಡೆ ರಾಷ್ಟ್ರೀಯ ಯೋಜನೆಯಾಗಿ ಘೋಷಣೆಯಾಗಲು ಕೇಂದ್ರ ನಿರ್ಧರಿಸುವಾಗಲೇ ಎಲ್ಲ ತಾಂತ್ರಿಕ ಮಾಹಿತಿ ರಾಜ್ಯ ಸರ್ಕಾರ ಪೂರೈಕೆ ಮಾಡಿತ್ತು. ಯಾವುದೇ ಬಾಕಿ ಇರಲಿಲ್ಲ. ದೇಬರ್ಶಿ ಮುಖರ್ಜಿ ಬರೆದ ಪತ್ರ ಅನುದಾನ ಬಿಡುಗಡೆಗೆ □□□ಂದ್ರ ಮಾಡುತ್ತಿರುವ ಖ್ಯಾತೆ ಹಾಗೂ ಕಾಲ ಹರಣ ಮಾಡುವುದಾಗಿದೆ ಎಂಬುದು ವೇದ್ಯವಾಗಿತ್ತೆಂದು ಯಾದವರೆಡ್ಡಿ ಆರೋಪಿಸಿದರು. ಕೇಂದ್ರ ಜಲಶಕ್ತಿ ಸಚಿವಾಲಯದ ಕಾರ್ಯದರ್ಶಿ ದೇಬರ್ಶಿ ಮುಖರ್ಜಿ ಬರೆದ ಪತ್ರಕ್ಕೆ ಅಕ್ಟೋಬರ್ 28ರಂದು ಕರ್ನಾಟಕ ಸರ್ಕಾರದ ಜಲಸಂಪನ್ಮೂಲ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ಹರ್ಷ ಗುಪ್ತ ಸಲ್ಲಿಸಿರುವ ಮರು ಪ್ರಸ್ತಾವನೆ ಅನುಸಾರ 1754 ಕೋಟಿ ರು ಖೋತವಾಗುತ್ತದೆ. ಮಾರ್ಚ್ 2022 ರವರೆಗೆ ಖರ್ಚು ಮಾಡಿದ ಅನುದಾನ ಆಧರಿಸಿ 5300 ಕೋಟಿ ರು ಕೇಂದ್ರದಿಂದ ಲಭ್ಯವಾಗಬೇಕಿತ್ತು. ಅಂದರೆ 14697 ಕೋಟಿ ರುಪಾಯಿ ಒಟ್ಟಾರೆ ಯೋಜನಾ ವೆಚ್ಚದಲ್ಲಿ 5528 ಕೋಟಿ ರುಪಾಯಿಯಷ್ಟು ರಾಜ್ಯ ಸರ್ಕಾರ ಖರ್ಚು ಮಾಡಿತ್ತು. ಉಳಿದ 9168 ಕೋಟಿ ರುಪಾಯಿಯಲ್ಲಿ ಕೇಂದ್ರ ಸರ್ಕಾರ ತನ್ನ ಪಾಲಿನ ಶೇ.60 ರಷ್ಟು ಮೊತ್ತ 5501 ಕೋಟಿ ಕೊಡಬೇಕಾಗಿದ್ದು ಅದನ್ನು 5300 ಕೋಟಿಗೆ ಸೀಮಿತಗೊಳಿಸಲಾಗಿತ್ತು.

ಹಾಲಿ ಕೇಂದ್ರ ಸಲ್ಲಿಸಲಾದ ಮರು ಪ್ರಸ್ತಾವನೆಯಲ್ಲಿ ಮಾರ್ಚ್ 2024 ರವರೆಗೆ ಖರ್ಚು ಮಾಡಲಾದ ಮಾಹಿತಿ ಸಲ್ಲಿಸಲಾಗಿದೆ. ಮಾರ್ಚ್ ಅಂತ್ಯಕ್ಕೆ ಭದ್ರಾ ಮೇಲ್ದಂಡೆಗೆ 8785ಕೋಟಿ ರು ಖರ್ಚು ಮಾಡಲಾಗಿದ್ದು 5910 ಕೋಟಿ ರುಪಾಯಿ ಬಾಕಿ ಉಳಿಯುತ್ತದೆ. ಈ ಮೊತ್ತಕ್ಕೆ ಶೇ.60 ರಷ್ಟು ಅನುದಾನವ ಕೇಂದ್ರ ಸರ್ಕಾರ ನೀಡಿದ್ದಲ್ಲಿ 3546 ಕೋಟಿ ರು ಮಾತ್ರ ಲಭ್ಯವಾಗುತ್ತದೆ. ಕೇವಲ ಎರಡು ವರ್ಷಕ್ಕೆ 1754 ಕೋಟಿ ರು ಖೋತವಾಗುತ್ತದೆ. ಕೇಂದ್ರ ಸರ್ಕಾರದ ಸೂಚನೆ ಪಾಲನೆ ಸಂಬಂಧ ರಾಜ್ಯ ಸಲ್ಲಿಸಿರುವ ಪ್ರಸ್ತಾವನೆ ಕೊಟ್ಟಷ್ಟು ಕೊಡಲಿ ಎಂಬಂತಿದೆ ಎಂದು ಯಾದವರೆಡ್ಡಿ ದೂರಿದರು.

ಭದ್ರಾ ಮೇಲ್ದಂಡೆ ವಿಚಾರವಾಗಿ ರಾಜ್ಯದ ಯಾರೊಬ್ಬ ಕೇಂದ್ರ ಸಚಿವರು ಹಾಗೂ ಬಿಜೆಪಿ ಸಂಸದರು ಪ್ರಧಾನಿ ನರೇಂದ್ರ ಮೋದಿ ಮುಂದೆ ನಿಂತು ಮಾತನಾಡುವ ಪರಿಸ್ಥಿತಿಯಿಲ್ಲ. ಸಚಿವರುಗಳಿಗೆ ಪ್ರಧಾನಿಯವರ ಭೇಟಿಗೆ ಟೈಂ ಸಿಗುತ್ತಿಲ್ಲ. ಕಳೆದ ತಿಂಗಳು ಚಿತ್ರದುರ್ಗಕ್ಕೆ ಆಗಮಿಸಿದ್ದ ಜಲಶಕ್ತಿಯ ರಾಜ್ಯ ಸಚಿವ ವಿ.ಸೋಮಣ್ಣ, ನೀರಾವರಿ ಅನುಷ್ಠಾನ ಸಮಿತಿಯೊಂದಿಗೆ ಸಭೆ ನಡೆಸಿ ಒಂದುವರೆ ತಿಂಗಳ ಒಳಗಾಗಿ ಕೇಂದ್ರದಿಂದ ಮೊದಲ ಕಂತಿನ ಅನುದಾನ ಬಿಡುಗಡೆ ಮಾಡಿಸುವುದಾಗಿ ಭರವಸೆ ನೀಡಿ ಹೋಗಿದ್ದರು. ಗಡುವು ಹತ್ತಿರ ಬಂದಿದೆ. ಈಗಲಾದರೂ ರಾಜ್ಯದ ಬಿಜೆಪಿ ಸಂಸದರು ದಿವ್ಯ ನಿರ್ಲಕ್ಷ್ಯದಿಂದ ಹೊರ ಬಂದು ಕೇಂದ್ರದಿಂದ ಭದ್ರಾ ಮೇಲ್ದಂಡೆಗೆ ಅನುದಾನ ಬಿಡುಗಡೆ ಮಾಡಿಸುವುದರ ಮೂಲಕ ಇಚ್ಚಾಶಕ್ತಿ ಪ್ರದರ್ಶಿಸಲಿ. ಜನತಂತ್ರ ವ್ಯವಸ್ಥೆ ಬದ್ಧತೆ ಅರಿತುಕೊಳ್ಳಲಿ ಎಂದು ಯಾದವ□□□□□□□□ ಆಗ್ರಹಿಸಿದರು.

ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಕೆ.ಆರ್. ದಯಾನಂದ,ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ, ಸಿಪಿಐ ಜಿಲ್ಲಾ ಕಾರ್ಯದರ್ಶಿ ಸುರೇಶ್ ಬಾಬು, ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ಮಲ್ಲಾಪುರ ತಿಪ್ಪೇಸ್ವಾಮಿ ಇದ್ದರು.

## ಬೆಳೆಹಾನಿ ರೈತರ ಪಟ್ಟಿ ಪ್ರಕಟ: ಆಕ್ಷೇಪಣೆಗಳಿಗೆ ಆಹ್ವಾನ

# ಜಿಲ್ಲೆಯಲ್ಲಿ 1,156.25 ಹೆಕ್ಟೇರ್ ಬೆಳೆಹಾನಿ

» ಚಿತ್ರದುರ್ಗ



ಕಳೆದ ಅಕ್ಟೋಬರ್ ಮಾಹೆಯಲ್ಲಿ ಚಿತ್ರದುರ್ಗ, ಚಳ್ಳಕೆರೆ, ಹಿರಿಯೂರು ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳಲ್ಲಿ ನೈಸರ್ಗಿಕ ವಿಕೋಪಗಳಾದ ಪ್ರವಾಹ, ಅತಿವೃಷ್ಠಿಯಿಂದ ಬೆಳೆಹಾನಿ ಆದ ರೈತರ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಈ ಕುರಿತು ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ಚಿತ್ರದುರ್ಗ, ಚಳ್ಳಕೆರೆ, ಹಿರಿಯೂರು ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳಲ್ಲಿ ಕಳೆದ ಅಕ್ಟೋಬರ್ ಮಾಹೆಯಲ್ಲಿ ನೈಸರ್ಗಿಕ ವಿಕೋಪಗಳಾದ ಪ್ರವಾಹ, ಅತಿವೃಷ್ಠಿಯಿಂದಉಂಟಾದ ಬೆಳೆ ಹಾನಿ ಬಗ್ಗೆ ಜಂಟಿ ಸಮೀಕ್ಷಾ ತಂಡವು ಸ್ಥಳ ಪರಿಶೀಲನೆ ನಡೆಸಿ, ಬೆಳೆ ಹಾನಿ ಕ್ಷೇತ್ರಗಳ ಮಾಹಿತಿ ನೀಡಿದೆ.

ಜಿಲ್ಲೆಯಲ್ಲಿ ಒಟ್ಟು 914.45 ಹೆಕ್ಟೇರ್ ಕೃಷಿ ಬೆಳೆ ಹಾಗೂ 241.80 ತೋಟಗಾರಿಕೆ ಬೆಳೆ ಸೇರಿ ಒಟ್ಟು 1,156.25 ಹೆಕ್ಟೇರ್ ಕ್ಷೇತ್ರದಲ್ಲಿ ಬೆಳೆ ಹಾನಿಯಾಗಿದೆ.

ಚಿತ್ರದುರ್ಗ ತಾಲ್ಲೂಕಿನಲ್ಲಿ 172.77 ಹೆಕ್ಟೇರ್ ಕೃಷಿ, 94.50 ತೋಟಗಾರಿಕೆ ಸೇರಿ 267.27 ಹೆಕ್ಟೇರ್ ಬೆಳೆ ಹಾನಿ ಸಂಭವಿಸಿದೆ. ಚಳ್ಳಕೆರೆ ತಾಲ್ಲೂಕಿನಲ್ಲಿ 478.47 ಹೆಕ್ಟೇರ್ ಕೃಷಿ ಬೆಳೆ, 89.40 ಹೆಕ್ಟೇರ್ ತೋಟಗಾರಿಕೆ ಸೇರಿ 567.87 ಹೆಕ್ಟೇರ್ ಬೆಳೆ ಹಾನಿಯಾಗಿದೆ. ಹಿರಿಯೂರು ತಾಲ್ಲೂಕಿನಲ್ಲಿ 162.50 ಹೆಕ್ಟೇರ್ ಕೃಷಿ, 35 ಹೆಕ್ಟೇರ್ ತೋಟಗಾರಿಕೆ ಬೆಳೆ ಸೇರಿ 197.50 ಹೆಕ್ಟೇರ್ ಹಾನಿಯಾಗಿದೆ.

ಪುಟ 2

# ಅಬಕಾರಿ ದಾಳಿ: 6.80 ಲಕ್ಷ ಮೌಲ್ಯದ ಅಕ್ರಮ ಗಾಂಜಾ ವಶ

» ಚಳ್ಳಕೆರೆ



ಚಳ್ಳಕೆರೆ ನಗರದವೂ ಸೇರಿದಂತೆ ತಾಲ್ಲೂಕಿನಾದ್ಯಂತ ಗಾಂಜಾ ಘಾಟು ಹೆಚ್ಚಾದ ಹಿನ್ನೆಲೆಯಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ಗಾಂಜಾ ಮಾರಾಟವನ್ನು ಸಂಪೂರ್ಣವಾಗಿ ತಡೆಯುವ ನಿಟ್ಟಿನಲ್ಲಿ ಕಾರ್ಯಾಚರಣೆ ನಡೆಸಿದ್ದು, ಒಂದೇ ಹಂತದಲ್ಲಿ 6 ಲಕ್ಷ ಮೌಲ್ಯದ ಗಾಂಜಾವನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿರುವುದಾಗಿ ಅಬಕಾರಿ ನಿರೀಕ್ಷಕ ಸಿ.ನಾಗರಾಜು ತಿಳಿಸಿದ್ದಾರೆ.

ಪುಟ 2

## ಪ್ರಮುಖ ಸುದ್ದಿ

### ರೈತರ ಪಹಣಿಯಲ್ಲಿ ವಕ್ಫ್ ಬೋರ್ಡ್ ಹೆಸರು ನಮೋದಾಗದಂತೆ ತಾಲ್ಲೂಕು ಆಡಳಿತ ಜಾಗ್ರತೆ ವಹಿಸಬೇಕು

# ಕೆಓಎಫ್ ಪ್ರತಿಕ್ವಿಂಟಾಲ್‌ಗೆ 9500 ಬೆಂಬಲ ಬೆಲೆ ನೀಡಬೇಕು

» ಚಳ್ಳಕೆರೆ



ಕಳೆದ ಸುಮಾರು 10 ವರ್ಷಗಳಿಂದ ತಾಲ್ಲೂಕಿನಾದ್ಯಂತ ಸಕಾಲದಲ್ಲಿ ಉತ್ತಮ ಮಳೆಯಾಗದೆ ಸುಮಾರು 85 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಶೇಂಗಾ ಬಿತ್ತನೆ ಮಾಡಬೇಕಿದ್ದು, ಮಳೆ ವೈಪಲ್ಯದಿಂದ ಕಡಿಮೆಯಾಗಿದೆ.ಸರ್ಕಾರರೈತರಿಗೆಬೆಂಬಲ ಬೆಲೆ ನೀಡಬೇಕು, ನಷ್ಟಕೊಳಗಾದ ರೈತರಿಗೆ ವಿಳಂಬ ಮಾಡದೆ ಪರಿಹಾರ ನೀಡಬೇಕು, ಯಾವುದೇರೈತರಜಮೀನಿಮಪಹಣಿಯಲ್ಲಿ ವಕ್‌ಫೋರ್ಡ್‌ಗೆ ನಮೂದಿಸದೆ ಅಧಿಕಾರಿಗಳು ಜಾಗೃತೆ ವಹಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯರೈತ ಸಂಘ ಹಾಗೂ ಹಸಿರು ಸೇನೆ(ಪ್ರೊ.ಬಣ) ರಾಜ್ಯಉಪಾಧ್ಯಕ್ಷ ರೆಡ್ಡಿಹಳ್ಳಿವೀರಣ್ಣ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಅವರು, ಪ್ರವಾಸಿಮಂದಿರದಲ್ಲಿ ರೈತರ ಪೂರ್ವಭಾವಿ ಸಭೆಯ ನಂತರ ತಹಶೀಲ್ದಾರ್ ರೇಹಾನ್‌ಪಾಷಯವರಗೆ ಮನವಿ ನೀಡಿ, ಸುಮಾರು ನಾಲ್ಕು ತಲೆಮಾರುಗಳಿಂದ ರೈತರ ಪಹಣಿಯಲ್ಲಿ ಖಾತೆಹೊಂದಿರುವ ಹೆಸರು ಮಾತ್ರ ಇದೆ ಆದರೆ ಕಳೆದ ವರ್ಷದಿಂದ ರೈತರ ಪಹಣಿಯಲ್ಲಿ ಇದು ವಕ್ಫ್ ಆಸ್ತಿ ಎಂದು ನಮೂದಿಸಲಾಗಿದೆ. ಇದರಿಂದ ಸಾವಿರಾರು ರೈತರ ಬದುಕು ಬೀದಿಗೆ ಬರಲಿದೆ. ಆದ್ದರಿಂದ ತಾಲ್ಲೂಕು ಆಡಳಿತ ಮುಂಜಾಗ್ರತಾ ಕ್ರಮವಾಗಿ ರೈತರ ಪಹಣಿಗೆ ವಕ್ಫ್‌ಬೋರ್ಡ್ ಆಸ್ತಿ ಎಂದು ನಮೂದಿಸಕೂಡದು ಎಂದು ಆಗ್ರಹಿಸಿದರು.

ತಾಲ್ಲೂಕಿನಾದ್ಯಂತ ಈ ಭಾರಿ ನಿರೀಕ್ಷಿತ ಮಟ್ಟದಲ್ಲಿ ಶೇಂಗಾಬೆಳೆ ಆಗಿಲ್ಲ, ಮಾರುಕಟ್ಟೆಯಲ್ಲಿ ಶೇಂಗಾದರ ಏರುಪೇರಾಗುತ್ತಿದ್ದು, ಕರ್ನಾಟಕ ಎಣ್ಣೆಬೀಜ ನಿಗಮ(ಕೆಓಎಫ್) ರೈತರ ಶೇಂಗಾ ಖರೀದಿಗೆ ಮುಂದಾಗಿರುವುದು ಸ್ವಾಗತ. ಆದರೆ, ಕೆಓಎಫ್‌ನವರು ಪ್ರತಿಕ್ವಿಂಟಾಲ್‌ಗೆ 6800ರೂ ದರ ನಿಗದಿಗೊಳಿಸಿದ್ದಾರೆ. ರೈತರು 9ಸಾವಿರಕ್ಕೂ ಹೆಚ್ಚು ಹಣ ನೀಡಿ ಶೇಂಗಾ ಬಿತ್ತನೆ ಬೀಜ ಖರೀದಿಸಿದ್ದಾರೆ. ಕೆಓಎಫ್‌ನವರು ಕಡೆಪಕ್ಷ ಪ್ರತಿಕ್ವಿಂಟಾಲ್‌ಗೆ 9500ರೂ ನೀಡಬೇಕೆಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ, ತಾವು ಸರ್ಕಾರಕ್ಕೆ ಬೇಡಿಕೆಗಳ ಈಡೇರಿಕೆ ಕುರಿತು ನೀಡಿದ ಮಾಹಿತಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳಿಸಿಕೊಡುವ ಭರವಸೆ ನೀಡಿದರು. ತಾಲ್ಲೂಕು ಅಧ್ಯಕ್ಷ ಕೆ.ಸಿ.ಶ್ರೀಕಂಠಮೂರ್ತಿ, ತಾ.ಪ್ರಧಾನ ಕಾರ್ಯದರ್ಶಿ ಆರ್.ಬಸವರಾಜು, ಎಂ.ಎನ್.ಚನ್ನಕೇಶವಮೂರ್ತಿ, ಬಿ.ಜಿ. ತಿಪ್ಪೇಸ್ವಾಮಿ, ಎನ್.ಐ.ವೆಂಕಟೇಶ್, ಕೆ.ಜಯಣ್ಣ, ತಿಪ್ಪಾರೆಡ್ಡಿ, ಗೌಡ್ರಚಿಕ್ಕಣ್ಣ, ಅಜ್ಜಪ್ಪ, ಸಣ್ಣಪಾಲಯ್ಯ, ಬೊಮ್ಮಯ್ಯ, ದೊಡ್ಡಣ್ಣ, ಬಿ.ಜಯಣ್ಣ, ಕೃಷ್ಣಪ್ಪ, ಈರಣ್ಣ, ಕೆ.ಬಿ.ಪಾಲಯ್ಯ, ಹನುಮಂತರಾಯ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಜಿಲ್ಲೆಯಲ್ಲಿ 1,156.25 ಹೆಕ್ಟೇರ್ ಬೆಳೆಹಾನಿ

» ಮೊದಲ ಪುಟದಿಂದ

ಮೊಳಕಾಲ್ಮೂರು ತಾಲ್ಲೂಕಿನಲ್ಲಿ 100.71 ಹೆಕ್ಟೇರ್ ಕೃಷಿ ಬೆಳೆ ಹಾಗೂ 22.90 ಹೆಕ್ಟೇರ್ ತೋಟಗಾರಿಕೆ ಬೆಳೆ ಸೇರಿ 123.61 ಹೆಕ್ಟೇರ್ ಬೆಳೆ ಹಾನಿಯಾಗಿದೆ. ಬೆಳೆಹಾನಿಯಾದ ರೈತರ ಪಟ್ಟಿಯನ್ನು ಜಿಲ್ಲಾಧಿಕಾರಿಗಳ ಕಚೇರಿ, ಉಪವಿಭಾಗಾಧಿಕರಿಗಳ ಕಚೇರಿ ಸೇರಿದಂತೆ ಆಯಾ ತಾಲ್ಲೂಕು ತಹಶೀಲ್ದಾರ್ ಕಚೇರಿ, ಗ್ರಾಮ ಪಂಚಾಯತಿ ಕಚೇರಿ, ರೈತ ಸಂಪರ್ಕ ಕೇಂದ್ರಗಳಲ್ಲಿ ಬುಧವಾರದಂದು ಪ್ರಕಟಿಸಲಾಗಿದೆ. ಈ ಕುರಿತು ಯಾವುದಾದರೂ ಆಕ್ಷೇಪಣೆಗಳು ಇದ್ದಲ್ಲಿ, ಸಂಬಂಧಪಟ್ಟ ತಹಶೀಲ್ದಾರ್, ಕೃಷಿ, ತೋಟಗಾರಿಕೆ ಇಲಾಖೆಯ ಕಚೇರಿಗಳಿಗೆ 7 ದಿನಗಳೊಳಗಾಗಿ ಸಲ್ಲಿಸಬಹುದು. ಈ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳು ಸಲ್ಲಿಕೆಯಾಗದಿದ್ದರೆ ಪಟ್ಟಿಯನ್ನು ಅಂತಿಮಗೊಳಿಸಿ ನಿಯಮಾನುಸಾರ ಪರಿಹಾರ ಪಾವತಿಗೆ ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಬಕಾರಿ ದಾಳಿ: 6.80 ಲಕ್ಷ ಮೌಲ್ಯದ ಅಕ್ರಮ ಗಾಂಜಾ ವಶ



» ಮೊದಲ ಪುಟದಿಂದ

ಅವರು, ಈ ಬಗ್ಗೆ ಮಾಹಿತಿ ನೀಡಿ, ಖಚಿತ ವರ್ತಮಾನದ ಮೇರೆಗೆ ಸೂಜಿಮಲ್ಲೇಶ್ವರನಗರದಲ್ಲಿ ಬಾಡಿಗೆಮನೆ ಪಡೆದು ಆಕ್ರಮವಾಗಿ ಗಾಂಜಾ ಸೊಪ್ಪನ್ನು ದಾಸ್ತಾನು ಮಾಡಿದ್ದ ತಳುಕಿನ ಮೆಹಬೂಬ್ ಎಂಬುವವರನ್ನು ವಶಕ್ಕೆ ಪಡೆದಿದ್ದು, ಅವರ ಮನೆಯಲ್ಲಿದ್ದ 13.670 ಗ್ರಾಂ ಗಾಂಜಾ ಸೊಪ್ಪನ್ನು ವಶಪಡಿಸಿಕೊಳ್ಳಲಾಗಿದೆ.

ಚಿತ್ರದುರ್ಗ ಜಿಲ್ಲಾ ಅಬಕಾರಿ ಜಿಲ್ಲಾಧಿಕಾರಿ ಡಾ.ಬಿ.ಮಾದೇಶ ನೇತೃತ್ವದಲ್ಲಿ ಚಿತ್ರದುರ್ಗ ಅಬಕಾರಿ ನಿರೀಕ್ಷಕಿ ಎ.ವನಿತಾ ಹಾಗೂ ಸಿಬ್ಬಂದಿ ವರ್ಗ ಈ ದಾಳಿಯ ನೇತೃತ್ವ ವಹಿಸಿದ್ದರು. ಒಟ್ಟು 6.80 ಲಕ್ಷ ಮೌಲ್ಯದ ಗಾಂಜಾವನ್ನು ವಶಕ್ಕೆ ಪಡೆಯಲಾಗಿದೆ. ಬುಧವಾರ ಬೆಳಗಿನ ಜಾವ ಅಬಕಾರಿ ಅಧಿಕಾರಿಗಳು ಮನೆ ಮೇಲೆ ದಾಳಿ ನಡೆಸಿದ ಸಂದರ್ಭದಲ್ಲಿ ಮನೆಗೆ ಬೀಗಹಾಕಿದ್ದು, ನ್ಯಾಯಾಧೀಶ ಆದೇಶ ಪಡೆದು ಮನೆಯ ಬೀಗ ಮುರಿಸಿ ಅಕ್ರಮ ಗಾಂಜಾ ವಶಪಡಿಸಿಕೊಂಡಿದ್ದಾರೆ. ನಗರಸಭೆ ವ್ಯವಸ್ಥಾಪಕ ಲಿಂಗರಾಜು, ವಿಶ್ವನಾಥ, ಅಬಕಾರಿ ಪಿಎಸ್‌ಐ ವಿ.ವೀರಣ್ಣ, ಮುಖ್ಯಪೇದೆ ರಮೇಶ್‌ನಾಯ್ಕ, ಬಸವರಾಜ, ನಾಗರಾಜ, ಸೋಮಶೇಖರ್, ನಾಗರಾಜತೋಳಮಟ್ಟಿ ಮುಂತಾದವರು ದಾಳಿಯಲ್ಲಿ ಭಾಗವಹಿಸಿದ್ದರು.

### ಇ-ಶ್ರಮ್ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ವಿತರಣೆ

» ಚಿತ್ರದುರ್ಗ

ಸರ್ವೋಚ್ಚ ನ್ಯಾಯಾಲಯವು ಇ–ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ (ಬಿ.ಪಿ.ಎಲ್) ನೀಡಲು ಆದೇಶಿಸಿದ್ದು, ಆದ್ಯತಾ ಪಡಿತರ ಚೀಟಿ ಹೊಂದಲು ಅರ್ಹ ಇ–ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ನೀಡುವ ಕಾರ್ಯ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರಾರಂಭವಾಗಿರುತ್ತದೆ. ಆದ್ದರಿಂದ ಆದ್ಯತಾ ಪಡಿತರ ಚೀಟಿ ಹೊಂದಿಲ್ಲದ ಇ–ಶ್ರಮ್ ನೋಂದಾಯಿತ ಎಲ್ಲಾ ಅರ್ಹ ಕಾರ್ಮಿಕರು ನಿಮ್ಮ ಹತ್ತಿರದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯನ್ನು ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ಟೋಲ್ ಫ್ರೀ ದೂರವಾಣಿ ಸಂಖ್ಯೆ 1800–425–9339 ಅಥವಾ ಸಹಾಯವಾಣಿ 1967ಕ್ಕೆ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.30 ಗಂಟೆಯವರೆವಿಗೂ ಸಂಪರ್ಕಿಸುವಂತೆ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಹಿಳೆ ಕಾಣೆ

» ದಾವಣಗೆರೆ

ಮಲೇಬೆನ್ನೂರು ಪೊಲೀಸ್ ಠಾಣೆಯ ವ್ಯಾಪ್ತಿಯ ಬೆಲೂರು ಗ್ರಾಮ, ರಾಣೇಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆಯ ನಾಗವೇಣಿ ಕೋಂ ಬ್ರಹ್ಮಾನಂದ 20 ವರ್ಷ, ಇವರು ಕಳೆದ ಅಕ್ಟೋಬರ್ 21 ರಂದು ಬೆಳಿಗ್ಗೆ 6 ಗಂಟೆಗೆ ಬಾತ್ ರೂಂಗೆ ಹೋಗಿ ಬರುತ್ತೇನೆಂದು ಹೇಳಿ ಹೋದವರು ವಾಪಾಸ್ ಬಂದಿರುವುದಿಲ್ಲ. ಚಹರೆ ವಿವರ. 4.5 ಅಡಿ ಎತ್ತರ, ಎಣ್ಣೆ ಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು, ಕೋಲು ಮುಖ ಹೊಂದಿರುತ್ತಾರೆ, ಹೋಗುವಾಗ ಹಳದಿ ಕಲರ್ ಚೂಡಿದಾರ ಧರಿಸಿರುತ್ತಾರೆ. ಇವರ ಬಗ್ಗೆ ಸುಳಿವು ಸಿಕ್ಕಲ್ಲಿ ದೂ.ಸಂ: 08192–268758, 272018, 262550, 9480803234, 9480803222, 9480803259 ಸಂಖ್ಯೆಗೆ ಮಾಹಿತಿ ನೀಡಲು ಮಲೇಬೆನ್ನೂರು ಠಾಣಾ ಸಬ್‌ಇನ್ಸ್ ಪೆಕ್ಟರ್ ತಿಳಿಸಿದ್ದಾರೆ.

# ಪಿಯು ಫಲಿತಾಂಶ ಸುಧಾರಣೆಯಲ್ಲಿ ವಿಷಯವಾರು ಕಾರ್ಯಾಗಾರಗಳು ಪ್ರಮುಖ ಪಾತ್ರ ನಿರ್ವಹಿಸುತ್ತವೆ

» ಚಿತ್ರದುರ್ಗ



ಇಲಾಖೆಯು ಕಳೆದ ವರ್ಷ ಹೊಸ ಪ್ರಶ್ನೆ ಪತ್ರಿಕೆ ಮಾದರಿಯನ್ನು ಪರಿಚಯಿಸಿ ವಿದ್ಯಾರ್ಥಿಗಳು 100 ಅಂಕಗಳ ಬದಲಿಗೆ 80 ಅಂಕಗಳಿಗೆ ಮಾತ್ರ ಪರೀಕ್ಷೆ ಬರೆಯಲು ಅನುವುಮಾಡಿಕೊಟ್ಟಿದೆ.ಅಸೈನ್ಮೆಂಟ್‌ಗೆಹತ್ತು ಅಂಕಗಳು ಹಾಗೂ ಅರ್ಧವಾರ್ಷಿಕ,ಕಿರು ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ಪಡೆದ ಅಂಕಗಳನ್ವಯ ಹತ್ತು ಅಂಕಗಳನ್ನು ನಿಗಧಿಗೊಳಿಸಿ ಒಟ್ಟು ಇಪ್ಪತ್ತು ಅಂಕಗಳನ್ನು ಅಂತರಿಕ ಅಂಕಗಳನ್ನಾಗಿಸಿದೆ.ಬದಲಾದ ಪಿಯು ಪ್ರಶ್ನೆ ಪತ್ರಿಕೆ,ಪರಿಣಾಮಕಾರಿ ಬೋಧನೆ,ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಲ್ಲಿ ಕಲಿಕಾಸಕ್ತಿ ಮೂಡಿಸುವುದು,ಪ್ರಶ್ನೆ ಪತ್ರಿಕೆ ತಯಾರಿಕೆ, ನೀಲಿನಕ್ಷೆ ಮತ್ತು ಫಲಿತಾಂಶ ಸುಧಾರಣೆಗೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಲು ಈ ಕಾರ್ಯಾಗಾರಗಳು ಹೆಚ್ಚು ಸಹಕಾರಿಯಾಗಿವೆ ಎಂದು ಚಿತ್ರದುರ್ಗ ಜಿಲ್ಲೆಯ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಆರ್.ಪುಟ್ಟಸ್ವಾಮಿ ತಿಳಿಸಿದರು.

ನಗರದ ಡಾನ್ ಬಾಸ್ಕೋ ಪದವಿ ಪೂರ್ವ ಕಾಲೇಜಿನಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಜಿಲ್ಲಾ ವ್ಯವಹಾರ ಅಧ್ಯಯನ ಹಾಗೂ ಲೆಕ್ಕಶಾಸ್ತ್ರ ಉಪನ್ಯಾಸಕರ ವೇದಿಕೆಯ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತಾನಾಡಿದರು.ಅವರು ಮುಂದುವರೆದು ಮತಾನಾಡುತ್ತ ಕಾರ್ಯಾಗಾರಗಳಲ್ಲಿ ಉಪನ್ಯಾಸಕರು ಕಡ್ಡಾಯವಾಗಿ ಭಾಗವಹಿಸುವಂತೆ ಆಯಾ ಕಾಲೇಜಿನ ಆಡಳಿತ ಮಂಡಳಿ ಮತ್ತು ಪ್ರಾಂಶುಪಾಲರುಗಳು ಕ್ರಮ ವಹಿಸಬೇಕು. ಮುಂದಿನ ದಿನಗಳಲ್ಲಿ ಜರುಗುವ ಕಾರ್ಯಾಗಾರಗಳಲ್ಲಿ ಭಾಗವಹಿಸದ ಕಾಲೇಜಿನ ಪ್ರಾಂಶುಪಾಲರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದೆಂದು ತಿಳಿಸಿದರು.

ಚಿತ್ರದುರ್ಗ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷರಾದ ಬಿ. ಆರ್.ಮಲ್ಲೇಶ್ ರವರು ಮಾತನಾಡುತ್ತಾ ಪಿಯು ಫಲಿಶಾಂಶ ಸುಧಾರಣೆಯಲ್ಲಿ ವಿಷಯವಾರು ವೇದಿಕೆಗಳು ಪ್ರಯೋಗಶೀಲ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಮುಂದಾಗಬೇಕು ಎಂದು ತಿಳಿಸಿದರು. ಇದೇ ವೇಳೆ ಉಪನ್ಯಾಸಕರ ಸಂಘದ ಸದಸ್ಯತ್ವ ಹೊಂದಲು ಇದೇ ನವೆಂಬರ್ 7 ರಂದು ಅಂತಿಮ ದಿನವಾಗಿದೆ.ಜಿಲ್ಲೆಯ ಎಲ್ಲಾ ಸರ್ಕಾರಿ,ಅನುದಾನಿತ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು ಆನ್ ಲೈನ್ ಮೂಲಕ ಸಂಘದ ಸದಸ್ಯತ್ವ ಪಡೆದು ಸಂಘಕ್ಕೆ ಬಲ ತುಂಬುವಂತೆ ಕರೆ ನೀಡಿದರು.

ಮತ್ತೋರ್ವ ಅತಿಥಿಗಳಾಗಿ ಆಗಮಿಸಿದ ಪ್ರಾಂಶುಪಾಲರ ಸಂಘದ ಅಧ್ಯಕ್ಷರಾದ ಎಸ್.ದೇವೇಂದ್ರಪ್ಪ ಮಾತಾನಾಡಿ, ಪ್ರತಿ ಉಪನ್ಯಾಸಕರು ಶಿಸ್ತು, ಸಮಯ ಪ್ರಜ್ಞೆ ಹಾಗೂ ಡ್ರಸ್ ಸೆನ್ಸ್ ನ್ನು ಮೈಗೂಡಿಸಿಕೊಂಡು ವಿದ್ಯಾರ್ಥಿಗಳಿಗೆ ಮಾದರಿ ಉಪನ್ಯಾಸಕರಾಗಲು ತಿಳಿಸಿದರು.

ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾ ವ್ಯವಹಾರ ಅಧ್ಯಯನ ಹಾಗೂ ಲೆಕ್ಕಶಾಸ್ತ್ರ ಉಪನ್ಯಾಸಕರ ವೇದಿಕೆಯ ಅಧ್ಯಕ್ಷರಾದ ಶ್ರೀಮತಿ ಲಕ್ಷ್ಮಿ ಎಂ.ಕೆ ವಹಿಸಿದ್ದರು. ಡಾನ್ ಬಾಸ್ಕೋ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಫಾದರ್ ಅನುಪ್ ಥಾಮಸ್ ಎಸ್ ಡಿಬಿ, ಉಪನ್ಯಾಸಕರಾದ ದಿವಾಕರ್,ರಾಘವೇಂದ್ರ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಆರಂಭದಲ್ಲಿ ಡಾನ್ ಬಾಸ್ಕೋ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ನಿ ಪ್ರಾರ್ಥನಾ ಗೀತೆಗೆ ಭರತನಾಟ್ಯ ಮಾಡಿದರು.ಉಪನ್ಯಾಸಕಿ ಶ್ರೀಮತಿ ದೀಪಿಕಾ ಎನ್.ಜೆ ಸ್ವಾಗತಿಸಿದರು, ಹಿರಿಯ ಉಪನ್ಯಾಸಕರಾದ ಮಲ್ಲಿಕಾರ್ಜುನ ವಂದಿಸಿದರು,

ಉಪನ್ಯಾಸಕಿ ಶ್ರೀಮತಿ ಮಹಾದೇವಿ ಕಾರ್ಯಕ್ರಮ ನಿರ್ವಹಣೆ ಮಾಡಿದರು. ಕಾರ್ಯಾಗಾರದಲ್ಲಿ ಜಿಲ್ಲೆಯ ವಿವಿಧ ಕಾಲೇಜುಗಳ ವಾಣಿಜ್ಯ ಶಾಸ್ತ್ರ ಉಪನ್ಯಾಸಕರು ಭಾಗವಹಿಸಿದರು

ಬೆಂಗಳೂರಿನ ಸೌಂದರ್ಯ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು ಹಾಗೂ ಸಂಪನ್ಮೂಲವ್ಯಕ್ತಿ ಶ್ರೀ ಮಹಾಬಲೇಶ್ವರ ತುಂಗಾ ರವರು ಉಪನ್ಯಾಸ ನೀಡಿದರು

# ಗ್ರಾಪಂ ಉಪಚುನಾವಣೆ: ವೇಳಾಪಟ್ಟಿ ಪ್ರಕಟ

» ಚಿತ್ರದುರ್ಗ

ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಖಾಲಿ ಸದಸ್ಯ ಸ್ಥಾನಗಳಿಗೆ ಉಪಚುನಾವಣೆ ನಡೆಸಲು ವೇಳಾಪಟ್ಟಿ ಪ್ರಕಟಿಸಲಾಗಿದೆ.

ಚುನಾವಣಾ ವೇಳಾಪಟ್ಟಿ ವಿವರ ಇಂತಿದೆ. 2024ರ ನ.06 ರಿಂದ 26 ರವರೆಗೆ ಚುನಾವಣೆ ನಡೆಯುವ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಚುನಾವಣಾ ನೀತಿಸಂಹಿತೆ ಜಾರಿಯಲ್ಲಿರುತ್ತದೆ. ನ.06ರಂದು ಬುಧವಾರ ಚುನಾವಣಾ ಅಧಿಸೂಚನೆ ಹೊರಡಿಸಲಾಗುವುದು.

ನ.12ರಂದು ಮಂಗಳವಾರ ನಾಮ ಪತ್ರ ಸಲ್ಲಿಸಲು ಕೊನೆಯ ದಿನ. ನ.13ರಂದು ಬುಧವಾರ ನಾಮಪತ್ರಗಳ ಪರಿಶೀಲನೆ, ನ.15ರಂದು ಶುಕ್ರವಾರ ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನವಾಗಿದೆ. ಮತದಾನ ಅವಶ್ಯವಿದ್ದರೆ ನ.23ರಂದು ಶನಿವಾರ ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ರವರೆಗೆ ಮತದಾನ ನಡೆಸಲಾಗುವುದು.

ಮರು ಮತದಾನ ಅವಶ್ಯವಿದ್ದರೆ ನ.25ರಂದು ಸೋಮವಾರ ನಡೆಸಲಾಗುವುದು. ನ.26ರಂದು ಮಂಗಳವಾರ ಬೆಳಿಗ್ಗೆ 8 ಗಂಟೆಯಿಂದ ತಾಲ್ಲೂಕು ಕೇಂದ್ರಗಳಲ್ಲಿ ಮತ ಎಣಿಕೆ ನಡೆಯಲಿದೆ. ನ.26ರಂದು ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳಲಿದೆ.

ಚುನಾವಣೆ ನಡೆಯುವ ಗ್ರಾಮ ಪಂಚಾಯಿತಿ ಹಾಗೂ ಸದಸ್ಯ ಸ್ಥಾನಗಳ ವಿವರ ಇಂತಿದೆ. ಮೊಳಕಾಲ್ಮೂರು ತಾಲ್ಲೂಕಿನ ಜಹಗೀರ್ ಬುಡ್ಡೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೊಲ್ಲರಹಟ್ಟಿ ಹೊಸಹಳ್ಳಿ ಕ್ಷೇತ್ರದ 1 ಸದಸ್ಯ ಸ್ಥಾನ (ಅನುಸೂಚಿತ ಜಾತಿ), ತುಮಕೂರ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕೋಬನಹಳ್ಳಿ–1 ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ), ಕೊಂಡ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೊಂಡ್ಲಹಳ್ಳಿ–5 ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ ಮಹಿಳೆ), ಚಳ್ಳಕೆರೆ ತಾಲ್ಲೂಕಿನ ಅಬ್ಬೇನಹಳ್ಳಿ ಗ್ರಾಮ ಪಂಚಾಯಿತಿಯ ಅಬ್ಬೇನಹಳ್ಳಿ ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ ಮಹಿಳೆ), ಚೌಳಕೆರೆ ಕ್ಷೇತ್ರದ 1 ಸದಸ್ಯ ಸ್ಥಾನ (ಅನುಸೂಚಿತ ಪಂಗಡ).



ಘಟಪರ್ತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಜ್ಜನಹಳ್ಳಿ ಕ್ಷೇತ್ರದ 1 ಸದಸ್ಯ ಸ್ಥಾನ (ಅನುಸೂಚಿತ ಪಂಗಡ–ಮಹಿಳೆ), ನೇರಲಗುಂಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಾತ್ರಿಕೇನಹಟ್ಟಿ ಕ್ಷೇತ್ರದ 1 ಸದಸ್ಯ ಸ್ಥಾನ (ಅನುಸೂಚಿತ ಪಂಗಡ), ಮೈಲನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೂದಿಹಳ್ಳಿ ಕ್ಷೇತ್ರದ 1 ಸದಸ್ಯ ಸ್ಥಾನ (ಅನುಸೂಚಿತ ಪಂಗಡ), ದೊಡ್ಡಚೆಲ್ಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕಚೆಲ್ಲೂರು–1 ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ), ಕಾಲುವೇಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯಾದಗಲಗಟ್ಟೆ ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ).

ಕ್ಯಾತಗೊಂಡನಹಳ್ಳಿ ಕ್ಷೇತ್ರದ 1 ಸದಸ್ಯ ಸ್ಥಾನ (ಅನುಸೂಚಿತ ಪಂಗಡ–ಮಹಿಳೆ), ಚಿತ್ರದುರ್ಗ ತಾಲ್ಲೂಕಿನ ಚಿಕ್ಕಗೊಂಡನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೊಲ್ಲರಹಟ್ಟಿ ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ–ಮಹಿಳೆ), ಭರಮಸಾಗರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಭರಮಸಾಗರ–4 ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ–ಮಹಿಳೆ), ಹಿರೇಗುಂಟನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೊಲ್ಲರಹಟ್ಟಿ ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ), ಜಂಪಣ್ಣನಾಯಕನಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಂಪಣ್ಣನಾಯಕನಕೋಟೆ–1 ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ–ಮಹಿಳೆ).

ಹಿರಿಯೂರು ತಾಲ್ಲೂಕಿನ ಮದಕರಿನಾಯಕನಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮದಕರಿನಾಯಕನ ಕೋಟೆ ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ), ಧರ್ಮಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೃಷ್ಣಾಪುರ ಕ್ಷೇತ್ರದ 1 ಸದಸ್ಯ ಸ್ಥಾನ (ಹಿಂದುಳಿದ ವರ್ಗ "ಬ"), ಮೇಟಿಕುರ್ಕೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಿರೆಹಳ್ಳದ ವಡ್ಡರಹಟ್ಟಿ ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ–ಮಹಿಳೆ), ಹೊಸಯಳನಾಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಸವನಹಳ್ಳಿ ಕ್ಷೇತ್ರದ 1 ಸದಸ್ಯ ಸ್ಥಾನ (ಅನುಸೂಚಿತ ಜಾತಿ), ಯಲ್ಲದಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಂದಿಗನಡು ಕ್ಷೇತ್ರದ 1 ಸದಸ್ಯ ಸ್ಥಾನ (ಅನುಸೂಚಿತ ಜಾತಿ), ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬ್ಯಾಡರಹಳ್ಳಿ–2 ಕ್ಷೇತ್ರದ 1 ಸದಸ್ಯ ಸ್ಥಾನ (ಅನುಸೂಚಿತ ಪಂಗಡ–ಮಹಿಳೆ).

ಹೊಸದುರ್ಗ ತಾಲ್ಲೂಕಿನ ಜಾನಕಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯಲ್ಲಾಭೋವಿಹಟ್ಟಿ ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ–ಮಹಿಳೆ), ಬೆಲಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹರಿಯನಹಳ್ಳಿ ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ–ಮಹಿಳೆ), ಶ್ರೀರಾಂಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶ್ರೀರಾಂಪುರ–2 ಕ್ಷೇತ್ರದ 1 ಸದಸ್ಯ ಸ್ಥಾನ (ಸಾಮಾನ್ಯ), ಹೆಗ್ಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಓಬಳಾಪುರ ಕ್ಷೇತ್ರದ 1 ಸದಸ್ಯ ಸ್ಥಾನ (ಹಿಂದುಳಿದ ವರ್ಗ "ಅ").

ಹೊಳಲ್ಕೆರೆ ತಾಲ್ಲೂಕಿನ ತೇಕಲವಟ್ಟಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತೇಕಲವಟ್ಟಿಗೊಲ್ಲರಹಟ್ಟಿ ಕ್ಷೇತ್ರದ 1 ಸದಸ್ಯ ಸ್ಥಾನ (ಹಿಂದುಳಿದ ವರ್ಗ "ಅ"–ಮಹಿಳೆ) ಹಾಗೂ 1 ಸದಸ್ಯ ಸ್ಥಾನ (ಸಾಮಾನ್ಯ) ವರ್ಗಕ್ಕೆ ಮೀಸಲಾಗಿದೆ. ಉಪ್ಪರಿಗೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಯಾಗಳಹಳ್ಳಿ ಕ್ಷೇತ್ರದ 1 ಸದಸ್ಯ ಸ್ಥಾನ (ಅನುಸೂಚಿತ ಪಂಗಡ–ಮಹಿಳೆ)ಕ್ಕೆ ಉಪ ಚುನಾವಣೆ ನಿಗಧಿಯಾಗಿದ್ದು, ಚುನಾವಣೆ ನಡೆಸಲು ಅಗತ್ಯ ಕ್ರಮಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಪಿಎಂಸಿ ಕಾಯಕನಿಧಿಯೋಜನೆಯಡಿ ಮೃತ ಹಮಾಲನ ಕುಟುಂಬಕ್ಕೆ 25 ಸಾವಿರ ಚೆಕ್ ವಿತರಣೆ



» ಚಳ್ಳಕೆರೆ

ಹಮಾಲರು ಅಕಾಲಿಕ ಮರಣಕ್ಕೆ ತುತ್ತಾದ ಸಂದರ್ಭದಲ್ಲಿ ಕೃಷಿ ಉತ್ಪನ್ನಮಾರುಕಟ್ಟೆಯಿಂದ ಕಾಯಕ ನಿಧಿ ಯೋಜನೆಯಡಿ ಅವರಿಗೆ ನೆರವು ನೀಡಲಾಗುತ್ತಿದ್ದು, ಇಲ್ಲಿನ ಚಕ್ಕಡಿ ಹಮಾಲಿ ವೃತ್ತಿಯ ರಾಮಾಂಜನೇಯ ಎಂಬುವವರು ಮರಣ ಹೊಂದಿದ ಹಿನ್ನೆಲೆಯ ಅವರ ಪತ್ನಿ ಪಾಲಮ್ಮನವರಿಗೆ ಕಾಯಕನಿಧಿ ಯೋಜನೆಯಡಿ 25 ಸಾವಿರ ಚೆಕನ್ನು ಎಪಿಎಂಸಿ ಕಾರ್ಯದರ್ಶಿ ಜಿ.ಎಸ್.ಸುರೇಶ್ ಕಚೇರಿಯಲ್ಲಿ ವಿತರಿಸಿದರು. ಸರ್ಕಾರ ಹಮಾಲ ವೃತ್ತಿಯವರಿಗೆ ಹಲವಾರು ಸೌಲಭ್ಯಗಳನ್ನು ನೀಡುತ್ತಾ ಬಂದಿದೆ. ನೊಂದಾವಣೆಯಾದ ಹಮಾಲರಿಗೆ ಸೌಲಭ್ಯಗಳು ಲಭ್ಯವಾಗುತ್ತದೆ. ಇತ್ತೀಚೆಗಷ್ಟೇ ಇಲ್ಲಿನ ಚಕ್ಕಡಿ ಹಮಾಲರ ರಾಮಾಂಜನೇಯ ಮೃತಪಟ್ಟಿದ್ದು ಅವರ ಪತ್ನಿಗೆ ಇಂದು ಚೆಕ್ ವಿತರಣೆ ಮಾಡಲಾಗಿದೆ. ಹಮಾಲರ ಸಂಕಷ್ಟಗಳಿಗೆ ಕೃಷಿ ಉತ್ಪನ್ನಮಾರುಕಟ್ಟೆ ನಿಯಮದಡಿ ಸಹಾಯವನ್ನು ನೀಡುತ್ತದೆ ಎಂದರು. ಮಾರುಕಟ್ಟೆ ಮೇಲ್ವಿಚಾರಕರಾದ ಟಿ.ವೆಂಕಟಲಕ್ಷ್ಮಿ, ಹರಿಪ್ರಸಾದ್ ಮುಂತಾದವರು ಉಪಸ್ಥಿತರಿದ್ದರು.

## ತರಬೇತಿ ಕಾರ್ಯಾಗಾರ

» ಚಿತ್ರದುರ್ಗ

ನ.8 ರಂದು ನಗರದ ಜಿ.ಪಂ. ಸಭಾಂಗಣದಲ್ಲಿ ಒಂದು ದಿನದ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿದೆ. 6 ಜಿಲ್ಲೆಗಳ ಸಾಂಖ್ಯಿಕ ಅಧಿಕಾರಿ ಹಾಗೂ ಸಿಬ್ಬಂದಿ ಭಾಗವಹಿಸುವರು. ಕಾರ್ಯಾಗಾರದಲ್ಲಿ 2024–25ನೇ ಸಾಲಿನ ಕೇಂದ್ರ ಪರಿಷ್ಕೃತ ಯೋಜನೆಗಳಾದ ಸಕಾಲಿಕ ವರದಿ ಮತ್ತು ಬೆಳೆ ಅಂಕಿ ಅಂಶಗಳ ಸುಧಾರಣೆ ಕುರಿತು ಬೆಳಿಗ್ಗೆ 9.30 ರಿಂದ ಸಂಜೆ 5.30ರವರೆಗೆ ಉಪನ್ಯಾಸಗಳು ಇರಲಿವೆ.

**ಪ್ರಮುಖ ಸುದ್ದಿ**

### ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸೂಚನೆ

# ನ.18 ರಂದು ಜಿಲ್ಲಾದ್ಯಂತ ಅರ್ಥಪೂರ್ಣ ಕನಕ ಜಯಂತಿ

» ಚಿತ್ರದುರ್ಗ



ಸರ್ಕಾರ ನಿರ್ದೇಶನದಂತೆ ಬರುವ ನವೆಂಬರ್ 18 ರಂದು ಜಿಲ್ಲಾದ್ಯಂತ ಅರ್ಥಪೂರ್ಣವಾಗಿ ಕನಕ ಜಯಂತಿ ಆಚರಣೆ ಮಾಡಲಾಗುವುದು. ಎಲ್ಲ ಸರ್ಕಾರಿ ಕಚೇರಿ, ಶಾಲಾ, ಕಾಲೇಜು, ಹಾಸ್ಟೆಲ್‌ಗಳಲ್ಲಿ ಕನಕದಾಸರ ಭಾವಚಿತ್ರ ಇರಿಸಿ ಗೌರವ ಸಮರ್ಪಿಸುವುದರೊಂದಿಗೆ ಜಯಂತಿ ಆಚರಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಕನಕ ಜಯಂತಿ ಆಚರಣೆ ಸಂಬಂಧ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕನಕ ಜಯಂತಿ ಅಂಗವಾಗಿ ನ. 18 ರಂದು ಬೆಳಿಗ್ಗೆ 9:30ಕ್ಕೆ ನಗರದ ಹೊಳಲ್ಕೆರೆ ರಸ್ತೆಯ ಕನಕ ವೃತ್ತದಿಂದ ಕನಕದಾಸರ ಭಾವಚಿತ್ರದ ಮೆರವಣಿಗೆ ಪ್ರಾರಂಭವಾಗಿ, ಸಂಗೊಳ್ಳಿ ರಾಯಣ್ಣ ವೃತ್ತ, ಗಾಂಧಿವೃತ್ತ, ಎಸ್‌ಬಿಐ ವೃತ್ತ, ಪ್ರವಾಸಿ ಮಂದಿರ ಮಾರ್ಗವಾಗಿ ಅಂಬೇಡ್ಕರ್ ವೃತ್ತ, ಮದಕರಿ ನಾಯಕರ ವೃತ್ತದ ಮೂಲಕ ತರಾಸು ರಂಗಮಂದಿರ ತಲುಪಲಿದೆ. ಅಂದು ಮಧ್ಯಾಹ್ನ 12:30 ಕ್ಕೆ ನಗರದ ತ.ರಾ.ಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಡೊಳ್ಳು, ವೀರಗಾಸೆ ಸೇರಿದಂತೆ ವಿವಿಧ ಜಾನಪದ ಕಲಾತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಲಿವೆ. ಸರ್ಕಾರದ ಶಿಷ್ಟಾಚಾರದ ಅನುಸಾರ ಆಹ್ವಾನ ಪತ್ರಿಕೆ ಮುದ್ರಿಸಿ, ಜನಪ್ರತಿನಿಧಿಗಳನ್ನು ಜಯಂತಿಗೆ ಆಹ್ವಾನಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು. ಜಯಂತಿ ಅಂಗವಾಗಿ ಕನಕದಾಸರ ಕೀರ್ತನೆಗಳ ಗೀತಗಾಯನ ಹಾಗೂಸಂಪನ್ಮೂಲವ್ಯಕ್ತಿಗಳಿಂದಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗುವುದು. ಜಯಂತಿ ಅಂಗವಾಗಿ ಒಂದು ದಿನ ಮುಂಚಿತವಾಗಿ ಕನಕದಾಸರ ಪ್ರತಿಮೆ ಸೇರಿದಂತೆ ನಗರದ ಎಲ್ಲಾ ಪ್ರತಿಮೆ ಹಾಗೂ ವೃತ್ತಗಳಿಗೂ ದೀಪಾಲಂಕಾರ ಹಾಗೂ ಪುಷ್ಪಾಲಂಕಾರ ಮಾಡಬೇಕು. ಜಿಲ್ಲಾಡಳಿತದ ವತಿಯಿಂದ ನಡೆಯುವ ಕನಕ ಜಯಂತಿ ಕಾರ್ಯಕ್ರಮಕ್ಕೆ ಸರ್ಕಾರಿ ಅಧಿಕಾರಿಗಳು, ನೌಕರರು ಕಡ್ಡಾಯವಾಗಿ ಭಾಗವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ: ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ತೋರಿದ ಕುರುಬ ಸಮಾಜದ ಐವರಿಗೆ ಹಾಗೂ ಇತರೆ ಐವರಿಗೆ ಸಮಾಜದ ವತಿಯಿಂದ ಕನಕ ಜಯಂತಿ ಕಾರ್ಯಕ್ರಮದಲ್ಲಿ ಸನ್ಮಾನ ಮಾಡಲು ಅವಕಾಶ ಮಾಡಿಕೊಡಬೇಕು ಎಂದು ಸಮಾಜದ ಮುಖಂಡರು ಸಭೆಯಲ್ಲಿ ಮನವಿ ಮಾಡಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಜಿ.ಪಂ.ಸಿಪಿಓ ಗಾಯಿತ್ರಿ, ನಗರಸಭೆ ಪೌರಾಯುಕ್ತೆ ರೇಣುಕಾ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್. ಕೆ.ಮಲ್ಲಿಕಾರ್ಜುನ್, ಜಿಲ್ಲಾ ಕುರುಬ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಶ್ರೀರಾಮ್, ನಗರಸಭೆ ಸದಸ್ಯೆ ಪಿ.ಕೆ.ಮೀನಾಕ್ಷಿ, ಸೇರಿದಂತೆ ಸಮಾಜದ ಮುಖಂಡರಾದ ಪೈಲ್ವಾನ್ ತಿಪ್ಪೇಸ್ವಾಮಿ, ಚಂದ್ರಶೇಖರ್, ಓಂಕಾರಮೂರ್ತಿ ಕುಮಾರ್ ಗೌಡ್ರು, ಮಂಜುನಾಥ, ಮಂಜಪ್ಪ ಸೇರಿದಂತೆ ಮತ್ತಿತರ ಗಣ್ಯರು, ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಜಿಲ್ಲಾಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆ: ಅರ್ಜಿ

» **ಚಿತ್ರದುರ್ಗ**

ಸಿರಿಧಾನ್ಯ ಮತ್ತು ಸಾವಯವ ಅಂತರಾಷ್ಟ್ರೀಯ ವಾಣಿಜ್ಯ ಮೇಳ – 2025 ರ ಅಂಗವಾಗಿ ರಾಜ್ಯಮಟ್ಟದ ಸಿರಿಧಾನ್ಯ ಮತ್ತು ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆಯ ಪೂರ್ವಭಾವಿಯಾಗಿ ಜಿಲ್ಲಾ ಮಟ್ಟದಲ್ಲಿ ಸಿರಿಧಾನ್ಯ ಮತ್ತು ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆಯನ್ನು ಕೃಷಿ ಇಲಾಖೆಯಿಂದ 2024ರ ನವೆಂಬರ್ 13ರಂದು ಬೆಳಿಗ್ಗೆ 10ಕ್ಕೆ ನಗರದ ಎಪಿಎಂಸಿ ಯಾರ್ಡ್ ಹತ್ತಿರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಏರ್ಪಡಿಸಲಾಗಿದ್ದು, ಈ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ. ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು, ಕೃಷಿ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹೊರುಪಡಿಸಿ, ಜಿಲ್ಲೆಯ ಎಲ್ಲಾ ಸಾರ್ವಜನಿಕರಿಗೆ ಭಾಗವಹಿಸಲು ಅವಕಾಶವಿರುತ್ತದೆ. ಅಭ್ಯರ್ಥಿಗಳು ತಮ್ಮ ಭಾವ ಚಿತ್ರದೊಂದಿಗೆ ಹೆಸರು, ವಿಳಾಸ ಮತ್ತು ತಯಾರಿಸುವ ಖಾದ್ಯ, ಬೇಕಾಗುವ ಸಾಮಗ್ರಿಗಳು, ತಯಾರಿಸಲು ಬೇಕಾಗುವ ಸಮಯ ಹಾಗೂ ತಯಾರಿಸುವ ವಿಧಾನದ ಸಂಕ್ಷಿಪ್ತ ಮಾಹಿತಿಯೊಂದಿಗೆ ಅರ್ಜಿಯನ್ನು 2024ರ ನವೆಂಬರ್ 12 ರೊಳಗೆ ಇ–ಮೇಲ್ ವಿಳಾಸ ರಿಜಚಿರಡುಥಿಣಚಿ@ಥಿಚಿhoo.ಛಿo.iಟಿ ಅಥವಾ ಖುದ್ದಾಗಿ, ಪೋಸ್ಟ್ ಮುಖಾಂತರ ಜಂಟಿ ಕೃಷಿ ನಿರ್ದೇಶಕರ ಕಛೇರಿ, ಎ.ಪಿ.ಎಂ.ಸಿ ರಸ್ತೆ, ಚಿತ್ರದುರ್ಗ – 577501 ವಿಳಾಸಕ್ಕೆ ಕಳುಹಿಸಬೇಕು.

ಸ್ಪರ್ಧೆಯಲ್ಲಿ ಭಾವಹಿಸುವ ಅಭ್ಯರ್ಥಿಗಳಿಗೆ ಸೂಚನೆಗಳು: ಪ್ರತಿ ಸ್ಪರ್ಧಿಗೆ ಒಂದೇ ತಿನಿಸು ಸಿಹಿ ಅಥವಾ ಖಾರ ಅಥವಾ ಮರೆತುಹೋದ ಖಾದ್ಯಗಳ ತಿನಿಸು ಮಾಡಲು ಅವಕಾಶವಿರುತ್ತದೆ ತಮ್ಮ ಅರ್ಜಿಯಲ್ಲಿ ನಮೂದಿಸಿದ ತಿನಿಸುಗಳನ್ನು, ಮನೆಯಲ್ಲಿಯೇ ತಯಾರಿಸಿ, 2024ರ ನವೆಂಬರ್ 13ರಂದು ಜಂಟಿ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಸರಿಯಾಗಿ ಬೆಳಿಗ್ಗೆ 10ಕ್ಕೆ ಪ್ರದರ್ಶಿಸುವುದು. ಪ್ರದರ್ಶಿಸುವ ಮುನ್ನ ಬೆಳಿಗ್ಗೆ 9 ಗಂಟೆಗೆ ನೊಂದಾವಣೆ ಮಾಡಬೇಕು. 2023–24ನೇ ಸಾಲಿನಲ್ಲಿ ಸಿರಿಧಾನ್ಯ ಪಾಕ ಸ್ಪರ್ಧೆಯಲ್ಲಿ ಭಾಗವಹಿಸಿ ರಾಜ್ಯ ಮಟ್ಟದಲ್ಲಿ ಮೊದಲನೇ, ದ್ವಿತೀಯ ಮತ್ತು ತೃತೀಯ ಬಹುಮಾನ ಪಡೆದ ಸ್ಪರ್ಧಿಗಳಿಗೆ ಪ್ರಸ್ತುತ ವರ್ಷದಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.

ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯದ ಸಸ್ಯಹಾರಿ ತಿನಿಸುಗಳಿಗೆ ಮಾತ್ರ ಅವಕಾಶವಿರುತ್ತದೆ. ತಯಾರಿಸಿದ ತಿನಿಸುಗಳ ಪ್ರದರ್ಶನ ತಯಾರಿಕೆಗೆ ಬಳಸಿದ ಸಾಮಗ್ರಿಗಳು, ತೋರಿಕೆ, ರುಚಿ, ಸುವಾಸನೆ, ಪೌಷ್ಠಿಕತೆಗಳ ಮೇಲೆ ಅಂತಿಮ ತೀರ್ಪು ಕೈಗೊಳ್ಳಲಾಗುವುದು. ತೀರ್ಪುಗಾರರ ನಿರ್ಧಾರವೇ ಅಂತಿಮವಾಗಿರುತ್ತದೆ. ಜಿಲ್ಲಾ ಮಟ್ಟದಲ್ಲಿ ಅತ್ಯುತ್ತಮ ಒಂದು ಸಿಹಿ, ಖಾರ (ಸಿರಿಧಾನ್ಯ ಖಾದ್ಯಗಳಿಗೆ ಮಾತ್ರ) ಮತ್ತು ಮರೆತು ಹೋದ ಖಾದ್ಯದ ತಿನಿಸನ್ನು ಆಯ್ಕೆ ಮಾಡಲಾಗುವುದು.ಜಿಲ್ಲಾ ಮಟ್ಟಕ್ಕೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನ ಸಿಹಿ, ಖಾರ (ಸಿರಿಧಾನ್ಯ ಖಾದ್ಯಗಳಿಗೆ ಮಾತ್ರ) ಮತ್ತು ಮರೆತು ಹೋದ ಖಾದ್ಯಗಳ ತಿನಿಸಿಗೆ ತಲಾ ರೂ.5000/–, 3000/– ಹಾಗೂ 2000/– ಗಳನ್ನು ನೀಡಲಾಗುವುದು.ರಾಜ್ಯ ಮಟ್ಟದ ಸ್ಪರ್ಧೆಯನ್ನು ಬೆಂಗಳೂರಿನಲ್ಲಿ ಏರ್ಪಡಿಸಲಾಗುತ್ತದೆ. ರಾಜ್ಯ ಮಟ್ಟದ "ಸಿರಿಧಾನ್ಯ" ಮತ್ತು "ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆ" ಯಲ್ಲಿ ಜಿಲ್ಲಾ ಮಟ್ಟದ ಪ್ರಥಮ ಬಹುಮಾನ ವಿಜೇತರು ಸ್ವತಃ ತಿನಿಸನ್ನು ತಯಾರಿಸಲು ಅವಶ್ಯವಿರುವ ಸಾಮಗ್ರಿಗಳೊಂದಿಗೆ ಸಿದ್ದರಿರಬೇಕು. ಜಿಲ್ಲಾ ಮಟ್ಟದಲ್ಲಿ ಪ್ರಥಮ ಬಹುಮಾನ ಪಡೆದವರು ನಿಗಧಿತ ದಿನಾಂಕದಂದು ಬೆಂಗಳೂರಿನಲ್ಲಿ ಏರ್ಪಡಿಸುವ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕು. ಖಾದ್ಯವನ್ನು ತಯಾರಿಸಲು ಬೇಕಾಗುವ ಸಾಮಗ್ರಿಗಳನ್ನು ತಾವೇ ತೆಗೆದುಕೊಂಡು, ನಿಗಧಿತ ಸ್ಥಳ ಹಾಗೂ ಸಮಯದಲ್ಲಿ ಖುದ್ದಾಗಿ ಖಾದ್ಯವನ್ನು ಅಲ್ಲಿಯೇ ತಯಾರಿಸಲು ಸಿದ್ದರಾಗಿರಬೇಕು.

### ಉಪನ್ಯಾಸ

» **ಚಿತ್ರದುರ್ಗ**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ರಿ.) ಚಿತ್ರದುರ್ಗ ಜಿಲ್ಲಾ ಘಟಕದವತಿಯಿಂದ ವಿಶೇಷ ಉಪನ್ಯಾಸ ಕಾರ್ಯಕ್ರಮವೂ ನ. 9ರ ಶನಿವಾರ ಬೆಳಗ್ಗೆ 11ಕ್ಕೆ ಜಿಲ್ಲಾಧಿಕಾರಿ ಕಚೇರಿ ಆವರಣದ ಪತ್ರಿಕಾ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಉಪನ್ಯಾಸ ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಂ.ವಿಜಯ್ ಉದ್ಘಾಟಿಸಲಿದ್ದಾರೆ. ವಕೀಲರು, ಪತ್ರಕರ್ತರು, ಚಿತ್ರನಟರು, ಎಂ.ವಿ.ರೇವಣಸಿದ್ದಯ್ಯರವರು "ಮಾನನಷ್ಟ ಮೊಕದ್ದಮೆ ಹಾಗೂ ನ್ಯಾಯಾಂಗ ನಿಂದನೆಯ ಬಗ್ಗೆ ಉಪನ್ಯಾಸ ನೀಡಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಬಿ.ದಿನೇಶ್ ಗೌಡಗೆರೆ ವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಕರ್ನಾಟಕ ಮಾಧ್ಯಮ ಅಕಾಡೆಮಿಯ ಸದಸ್ಯರಾದ ಎಂ.ಎನ್. ಅಹೋಬಳಪತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಬಿ.ವಿ.ತುಕಾರಾಂರಾವ್ ಆಗಮಿಸಲಿದ್ದಾರೆ.

### ಸ್ವಾಮೀಜಿ ಮೇಲೆ ಹಲ್ಲೆ ಖಂಡನೆ

» **ಚಿತ್ರದುರ್ಗ**

ಕಾಸರಗೋಡು ಬೊವಿಕ್ಕಾನದಲ್ಲಿ ಎಡನೀರು ಸಂಸ್ಥಾನದ ಸಚ್ಚಿದಾನಂದ ಭಾರತಿ ಸ್ವಾಮಿಜಿಯವರ ವಾಹನವನ್ನು ಅಡ್ಡಗಟ್ಟಿ ಹಲ್ಲೆಗೆ ಯತ್ನಿಸಿರುವ ಸಮಾಜಘಾತುಕ ಶಕ್ತಿಗಳ ಕೃತ್ಯವನ್ನು ಚಿತ್ರದುರ್ಗ ಬ್ರಾಹ್ಮಣ ಸಂಘದ ಅಧ್ಯಕ್ಷ ಪಿ.ಎಸ್.ಮಂಜುನಾಥ್, ಕಾರ್ಯದರ್ಶಿ ಡಿ.ಜಿ.ಪ್ರಾಣೇಶ್‌ರಾವ್ ಹಾಗೂ ಪದಾಧಿಕಾರಿಗಳು ತೀವ್ರವಾಗಿ ಖಂಡಿಸಿದ್ದಾರೆ.

# ವಿಜೃಂಭಣೆಯ ಒನಕೆ ಓಬವ್ವ ಜಯಂತಿ ಆಚರಣೆ; ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

» **ಚಿತ್ರದುರ್ಗ**

ಜಿಲ್ಲಾಡಳಿತದ ವತಿಯಿಂದ ಇದೇ ನವೆಂಬರ್ 11 ರಂದು ಜಿಲ್ಲಾ ಕೇಂದ್ರದಲ್ಲಿ ವೀರ ವನಿತೆ ಒನಕೆ ಓಬವ್ವ ಜಯಂತಿಯನ್ನು ವಿಜೃಂಭಣೆಯಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ಅಗತ್ಯ ಪೂರ್ವಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಒನಕೆ ಓಬವ್ವ ಜಯಂತಿ ಆಚರಿಸುವ ಸಂಬಂಧ ಅಗತ್ಯ ಪೂರ್ವಸಿದ್ಧತೆ ಕೈಗೊಳ್ಳುವ ಬಗ್ಗೆ ಚರ್ಚಿಸಲು ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವೀರ ವನಿತೆ ಒನಕೆ ಓಬವ್ವ ಜಯಂತಿ ಅಂಗವಾಗಿ ನವೆಂಬರ್ 11 ರಂದು ಬೆಳಿಗ್ಗೆ 9ಕ್ಕೆ ನಗರದ ಹೊಳಲ್ಕೆರೆ ರಸ್ತೆಯ ಗೌರಸಮುದ್ರ ಮಾರಮ್ಮ ದೇಗುಲದ ಸಮೀಪದಿಂದ ಒನಕೆ ಓಬವ್ವ ಭಾವಚಿತ್ರದ ಮೆರವಣಿಗೆಯು ಪ್ರಾರಂಭವಾಗಿ ಸಂಗೊಳ್ಳಿ ರಾಯಣ್ಣ ವೃತ್ತ, ಗಾಂಧಿವೃತ್ತ, ಪ್ರವಾಸಿ ಮಂದಿರ ಮಾರ್ಗವಾಗಿ ಒನಕೆ ಓಬವ್ವ ವೃತ್ತ, ಮದಕರಿ ನಾಯಕ ವೃತ್ತದ ಮೂಲಕ ತರಾಸು ರಂಗಮಂದಿರ ತಲುಪಲಿದೆ. ಮೆರವಣಿಗೆಯಲ್ಲಿ ಜಾನಪದ ಕಲಾತಂಡಗಳು ಭಾಗವಹಿಸಲಿವೆ. ಬೆಳಿಗ್ಗೆ 11ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು, ಎಲ್ಲ ಸಮಾಜದವರು ಪಾಲ್ಗೊಳ್ಳಬೇಕು ಎಂದರು.



ಸರ್ಕಾರದ ಶಿಷ್ಟಾಚಾರದ ಅನುಸಾರ ಆಹ್ವಾನಪತ್ರಿಕೆಮುದ್ರಿಸಿ,ಜನಪ್ರತಿನಿಧಿಗಳನ್ನು ಜಯಂತಿಗೆ ಆಹ್ವಾನಿಸಲಾಗುವುದು. ಒನಕೆ ಓಬವ್ವ ಅವರ ಕುರಿತು ಸಂಪನ್ಮೂಲ ವ್ಯಕ್ತಿ ಡಾ.ತಿಪ್ಪೇಸ್ವಾಮಿ ಮತ್ಸಮುದ್ರ ಅವರಿಂದ ವಿಶೇಷ ಉಪನ್ಯಾಸ ಹಾಗೂ ಕಲಾವಿದರಿಂದ ಗೀತಗಾಯನ ಕಾರ್ಯಕ್ರಮ ಆಯೋಜಿಲಾಗುವುದು. ಜಯಂತಿ ಅಂಗವಾಗಿ ನಗರದ ಪ್ರಮುಖ ವೃತ್ತಗಳಿಗೆ ಅಲಂಕಾರ ಮಾಡಬೇಕು. ಒಂದು ದಿನ ಮುಂಚಿತವಾಗಿ ಒನಕೆ ಓಬವ್ವ ಪ್ರತಿಮೆಗೆ ವಿದ್ಯುತ್ ಅಲಂಕಾರ ಹಾಗೂ ಪುಷ್ಪಾಲಂಕಾರ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಮಾಜದ ಮುಖಂಡ ಹೆಚ್.ಸಿ. ನಿರಂಜನಮೂರ್ತಿ ಮಾತನಾಡಿ, ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಜಯಂತಿ ಕಾರ್ಯಕ್ರಮದಲ್ಲಿ ಸಮಾಜದ ವತಿಯಿಂದ ಪ್ರತಿಭಾ ಪುರಸ್ಕಾರ ನೀಡಿ, ಗೌರವಿಸಲಾಗುವುದು ಎಂದು ಹೇಳಿದರು.

ಚಿತ್ರದುರ್ಗ ಸರ್ಕಾರಿ ವೈದ್ಯಕೀಯ ಕಾಲೇಜಿಗೆ ವೀರ ವನಿತೆ ಒನಕೆ ಓಬವ್ವ ಹೆಸರು ನಾಮಕರಣ ಮಾಡುವಂತೆ ರಾಜ್ಯ ಸಭಾ ಮಾಜಿ ಸದಸ್ಯ ಹೆಚ್.ಹನುಮಂತಪ್ಪ ಮನವಿ ಮಾಡಿದರು.

ಸಭೆಯಲ್ಲಿ ಛಲವಾದಿ ಮಹಾಸಂಸ್ಥಾನ ಗುರುಪೀಠ ಟ್ರಸ್ಟ್‌ನ ಬಸವ ನಾಗಿದೇವ ಸ್ವಾಮೀಜಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಗಾಯತ್ರಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಛಲವಾದಿ ಸಮಾಜದ ಮುಖಂಡರಾದ ಹೆಚ್.ಸಿ. ನಿರಂಜನಮೂರ್ತಿ, ಶೇಷಣ್ಣ, ಎಸ್.ವಿ.ಗುರುಮೂರ್ತಿ,ಎನ್.ಬಿ.ಭಾರ್ಗವಿ ದ್ರಾವಿಡ್, ಎಸ್.ಎನ್. ರವಿಕುಮಾರ್, ತಿಪ್ಪೇಸ್ವಾಮಿ, ನವೀನ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮಾಜದ ಮುಖಂಡರು ಇದ್ದರು.

## ಶಿಷ್ಯೋಪನಯನ ಸಂಸ್ಕಾರ, ಪ್ರತಿಜ್ಞಾ ವಿಧಿ ಸ್ವೀಕಾರ

» **ಚಿತ್ರದುರ್ಗ**

ಸಾವಿರಾರು ವರ್ಷಗಳಿಂದಲೂ ರೂಢಿಯಲ್ಲಿರುವ ಆಯುರ್ವೇದಿಕ್‌ಗೆ ಪಾಶ್ಚಿಮಾತ್ಯ ರಾಷ್ಟ್ರಗಳಲ್ಲಿ ಹೆಚ್ಚಿನ ಬೇಡಿಕೆಯಿದೆ ಎಂದು ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಅಡಿಯಲ್ಲಿ ನಡೆಯುತ್ತಿರುವ ಪ್ರಕೃತಿ ಆಯುರ್ವೇದಿಕ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಪ್ರಥಮ ವರ್ಷದ ವಿದ್ಯಾರ್ಥಿಗಳ

ಶಿಷ್ಯೋಪನಯನ ಸಂಸ್ಕಾರ ಮತ್ತು ಪ್ರತಿಜ್ಞಾ ವಿಧಿ ಸ್ವೀಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿದರು.



ಯಾವುದೆ ಫಲಾಪೇಕ್ಷೆಯಿಲ್ಲದೆ ಕಳೆದ ನಲವತ್ತು ವರ್ಷಗಳಿಂದಲೂ ಶಿಕ್ಷಣ ಸಂಸ್ಥೆಯನ್ನು ಮುನ್ನಡೆಸುತ್ತಿದ್ದೇವೆ. ವೈದ್ಯಕೀಯ ಸೇವೆ ಅತ್ಯಂತ ಅಮೂಲ್ಯವಾದುದು. ಸಮಾಜಕ್ಕೆ ನಿಮ್ಮ ಸೇವೆ ಬೇಕು. ಹಳೆಯ ವೈದ್ಯಕೀಯ ಕಾಲೇಜುಗಳಲ್ಲಿ ಸಿಗುವಂತ ಮೂಲಭೂತ ಸೌಲಭ್ಯಗಳನ್ನು ಪ್ರಥಮ ವರ್ಷದಲ್ಲಿಯೇ ನಿಮಗೆ ಒದಗಿಸಿದ್ದೇವೆ. ಮನಸ್ಸನ್ನು ಬೇರೆ ಕಡೆ ಹರಿಸದೆ ಶ್ರದ್ದೆಯಿಂದ ವೈದ್ಯಕೀಯ ಶಿಕ್ಷಣ ಪಡೆದು ನಿಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಶಾಸಕ ಡಾ.ಎಂ.ಚಂದ್ರಪ್ಪ ಕರೆ ನೀಡಿದರು.

ಎಂ.ಬಿ.ಬಿ.ಎಸ್. ಸೀಟು ಪಡೆಯಲು ಕನಿಷ್ಟ ಎರಡು ಕೋಟಿ ರೂ.ಗಳನ್ನು ಪಾವತಿಸಬೇಕು. ಆದರೆ ಆಯುರ್ವೇದಿಕ್ ವೈದ್ಯಕೀಯ ಪದ್ದತಿಯಲ್ಲಿ ನೀವುಗಳು ಅಷ್ಟೊಂದು ಶುಲ್ಕ ಪಾವತಿಸಬೇಕಿಲ್ಲ. ಸಿಕ್ಕಿರುವ ಅವಕಾಶವನ್ನು ಸದುಪಯೋಗಪಡಿಸಿಕೊಂಡು ನಿಮ್ಮ ತಂದೆ–ತಾಯಿ, ಗುರು–ಹಿರಿಯರು, ಓದಿದ ಶಿಕ್ಷಣ ಸಂಸ್ಥೆಗೆ ಕೀರ್ತಿ ತನ್ನಿ ಎಂದು ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸಿ.ರಘುಚಂದನ್ ಮಾತನಾಡಿ ನಲವತ್ತು ವರ್ಷಗಳ ಹಿಂದೆ ಚಿಕ್ಕದಾಗಿ ಆರಂಭಗೊಂಡ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಈಗ ದೊಡ್ಡ ಹೆಮ್ಮರವಾಗಿ ಬೆಳೆದಿರುವುದರ ಹಿಂದೆ ಸಂಸ್ಥಾಪಕ ಡಾ.ಎಂ.ಚಂದ್ರಪ್ಪನವರ ಪರಿಶ್ರಮವಿದೆ. ಈ ಸಂಸ್ಥೆಯಲ್ಲಿ ಬಿ.ಇ.ಡಿ. ನರ್ಸಿಂಗ್, ಬಿ.ಕಾಂ. ಬಿಸಿಎಂ. ಎಂಬಿಎ. ಫಾರ್ಮಿಸಿ ಹೀಗೆ ಎಲ್ಲಾ ರೀತಿಯ ಶಿಕ್ಷಣವನ್ನು ನೀಡಲಾಗುತ್ತಿದೆ. ಆಯುರ್ವೇದಿಕ್ ಅತ್ಯಂತ ಪುರಾತನ ಪದ್ದತಿ. ಶಿಕ್ಷಣದ ನಂತರ ವೈದ್ಯರುಗಳಾದ ಮೇಲೆ ಸಮಾಜಕ್ಕೆ ನಿಮ್ಮ ಸೇವೆ ಅತ್ಯವಶ್ಯಕ ಎಂದು ಹೇಳಿದರು.

ಜಿಲ್ಲಾ ಆಯುಷ್ ವಿಭಾಗದ ಡಿಎಓ. ಡಾ.ಚಂದ್ರಕಾಂತ್ ಮಾತನಾಡುತ್ತ ಆಯುರ್ವೇದಿಕ್ ಕಾಲೇಜಿಗೆ ದಾಖಲಾತಿ ಪಡೆದಾಕ್ಷಣ ವೈದ್ಯರುಗಳಾಗಿದ್ದೇವೆಂದುಕ ೊಳ್ಳಬೇಡಿ. ಐದು ವರ್ಷಗಳ ನಂತರ ನಿಮಗೆ ಮತ್ತೆ ಯಾರು ಹೇಳಿಕೊಡುವುದಿಲ್ಲ. ಮುಂದೆ ಪಿ.ಜಿ.ಶಿಕ್ಷಣ ಪಡೆಯಬೇಕಾಗುತ್ತದೆ. ಹಾಗಾಗಿ ಆಯುರ್ವೇದಿಕ್ ಶಿಕ್ಷಣವನ್ನು ಚೆನ್ನಾಗಿ ಪಡೆದು ಈ ಪದ್ದತಿಯನ್ನು ಉಳಿಸಿ ಬೆಳೆಸುವಂತೆ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ತಿಳಿಸಿದರು.ಪ್ರಕೃತಿ ಆಯುರ್ವೇದಿಕ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಂಶುಪಾಲರಾದ ಡಾ.ಎಸ್.ಬಿ. ನವಾಝ್, ಸಂಸ್ಥೆಯ ವಿವಿಧ ವಿಭಾಗಗಳ ಪ್ರಾಂಶುಪಾಲರು, ಸಿಬ್ಬಂದಿಯವರು ಪ್ರತಿಜ್ಞಾ ವಿಧಿ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಿದ್ದರು.

## ಅಂಚೆ ಇಲಾಖೆಯಿಂದ ಜೀವನ ಪ್ರಮಾಣ ಪತ್ರ ಅಭಿಯಾನ




» **ಚಿತ್ರದುರ್ಗ**

ಕರ್ನಾಟಕ ಅಂಚೆ ಮತ್ತು ದೂರಸಂಪರ್ಕ ನಿವೃತ್ತ ನೌಕರರ ಸಂಘ ಬೆಂಗಳೂರು ಇವರಿಂದ ಚಿತ್ರದುರ್ಗದ ಹೊಳಲ್ಕೆರೆ ರಸ್ತೆಯಲ್ಲಿನ ಪ್ರಧಾನ ಅಂಚೆ ಕಚೇರಿಯಲ್ಲಿ ದಿನಾಂಕ 9.11.2024ರ ಶನಿವಾರ ಬೆಳಿಗ್ಗೆ 10:00 ಗಂಟೆಯಿಂದ ಸಂಜೆ 4 ಗಂಟೆವರೆಗೆ ಕೇಂದ್ರ ರಾಜ್ಯ ಹಾಗೂ ಸಾರ್ವಜನಿಕ ಕ್ಷೇತ್ರದ ನಿವೃತ್ತ ನೌಕರರಿಗೆ ಪಿಂಚಣಿಯನ್ನು ಮುಂದುವರೆಸಲು ಬೇಕಾಗುವ ಜೀವನ ಪ್ರಮಾಣ ಪತ್ರ ಅಭಿಯಾನವನ್ನು (Digital life certificate campaign) ಉಚಿತವಾಗಿ ಏರ್ಪಡಿಸಲಾಗಿದೆ.

ಈ ಅಭಿಯಾನಕ್ಕೆ ಸ್ವಯಂಸೇವಕರಾಗಿ ಸಂಘದ ಉಪಾಧ್ಯಕ್ಷರಾದ ಬೆಂಗಳೂರಿನ ಜನರಲ್ ಮ್ಯಾನೇಜರ್ ಫೈನಾನ್ಸ್ ಅಂಡ್ ಅಕೌಂಟ್ಸ್ ಕಛೇರಿಯ ನಿವೃತ್ತ ಮುಖ್ಯ ಲೆಕ್ಕಾಧಿಕಾರಿ ಶ್ರೀಮತಿ ಎನ್ ನಾಗಲಕ್ಷ್ಮಿ, ಮೈಸೂರಿನ ಅಂಚೆ ತರಬೇತಿ ಕೇಂದ್ರದ ನಿವೃತ್ತ ಉಪ ನಿರ್ದೇಶಕರಾದ ಎಸ್ ರಾಜಶೇಖರ್, ನಿವೃತ್ತ ಹಿರಿಯ ಅಂಚೆ ಅಧೀಕ್ಷಕರಾದ ಡಿ. ಶಿವಯ್ಯ, ನಿವೃತ್ತ ಹಿರಿಯ ಅಂಚೆ ಅಧೀಕ್ಷಕರಾದ ಪ್ರಕಾಶ್, ದಾವಣಗೆರೆಯ ನಿವೃತ್ತ ಉಪ ಅಂಚೆ ಪಾಲಕ(ಲೆಕ್ಕ)ರಾದ ಬಿ. ಟಿ.ಚಂದ್ರಶೇಖರ್ ಭಾಗವಹಿಸಲಿದ್ದಾರೆ. ಚಿತ್ರದುರ್ಗದ ಎಲ್ಲಾ ಕೇಂದ್ರ ಮತ್ತು ರಾಜ್ಯ ಸರ್ಕಾರದ ನಿವೃತ್ತ ನೌಕರರು ಹಾಗೂ ಕೇಂದ್ರ ಸಾರ್ವಜನಿಕ ಸಂಸ್ಥೆಯ ನಿವೃತ್ತ ನೌಕರರು ಅಭಿಯಾನದ ಸದುಪಯೋಗ ಪಡೆದುಕೊಂಡು ತಮ್ಮ ಜೀವನ್ ಪ್ರಮಾಣ ಪತ್ರವನ್ನು ಸಲ್ಲಿಸಬೇಕೆಂದು ವಿನಂತಿಸಿಕೊಳ್ಳಲಾಗಿದೆ. ಜೀವನ ಪ್ರಮಾಣ ಪತ್ರದ ಅಭಿಯಾನಕ್ಕೆ ಬರುವ ನಿವೃತ್ತ ನೌಕರರು ಕೆಳಗಿನ ದಾಖಲೆಗಳನ್ನು ಕಡ್ಡಾಯವಾಗಿ ತರತಕ್ಕದ್ದು1. ತಮ್ಮ ಪಿಂಚಣಿ ಪುಸ್ತಕ, 2. ಪಿಂಚಣಿ ಜಮಾ ಆಗುತ್ತಿರುವ ಬ್ಯಾಂಕ್ ಅಥವಾ ಅಂಚೆ ಇಲಾಖೆಯ ಉಳಿತಾಯ ಖಾತೆಪಾಸ್ ಬುಕ್, 3. ಆಧಾರ್ ಕಾರ್ಡ್, 4. ಆಧಾರ್ ಕಾರ್ಡಿಗೆ ಜೋಡಣೆ ಯಾಗಿರುವ ಮೊಬೈಲ್‌ನ್ನು ತರಬೇಕಾಗಿ ಕರ್ನಾಟಕ ಅಂಚೆ ಮತ್ತು ದೂರಸಂಪರ್ಕ ನಿವೃತ್ತ ನೌಕರರ ಸಂಘ ಬೆಂಗಳೂರು ಇವರು ಮನವಿ ಮಾಡಿದ್ದಾರೆ.

## ಸ್ವಚ್ಛತೆ, ಘನತ್ಯಾಜ್ಯ ನಿರ್ವಹಣೆಗೆ ಸಾರ್ವಜನಿಕರು, ಸಂಘ ಸಂಸ್ಥೆಗಳಿಂದ ಸಲಹೆಗಳ ಆಹ್ವಾನ

**ದಾವಣಗೆರೆ:** ಕೇಂದ್ರ ಸರ್ಕಾರದ ಸ್ವಚ್ಛ ಭಾರತ್ ಮಿಷನ್ ಯೋಜನೆಯ ಪ್ರಮುಖ ಗುರಿಗಳಾದ ಮನೆ ತ್ಯಾಜ್ಯ ಸಂಗ್ರಹಣೆ, ವಿಂಗಡಣೆ ಹಾಗೂ ಸಾರ್ವಜನಿಕ ಸ್ಥಳಗಳ ಸ್ವಚ್ಛತೆ, ಪ್ಲಾಸ್ಟಿಕ್ ನಿಷೇಧ, ನಗರ ಸೌಂದರೀಕರಣ ಹಾಗೂ ವೈಜ್ಞಾನಿಕ ವಿಲೇವಾರಿಯಲ್ಲಿ ಸಾರ್ವಜನಿಕರ ಸಹಕಾರದೊಂದಿಗೆ ದಾವಣಗೆರೆ ಮಹಾನಗರ ಪಾಲಿಕೆಯು ಪ್ರಗತಿ ಸಾಧಿಸಿರುತ್ತದೆ. ಇದರ ಪ್ರಮಾಣೀಕರಣಕ್ಕೆ ಅವಶ್ಯವಿರುವ ಎಲ್ಲಾ ಮಾನದಂಡಗಳನ್ನು ಅನುಸರಿಸಿರುತ್ತದೆ. ಆದ್ದರಿಂದ ನಗರವನ್ನು ಕಸ ಮುಕ್ತ ನಗರ ಸ್ಟಾರ್ ರೇಟಿಂಗ್ 3 ಎಂದು ಘೋಷಿಸಲಾಗುವುದು. ಈ ಕಚೇರಿಗೆ ಲಿಖಿತ ರೂಪದಲ್ಲಿ ನವೆಂಬರ್ 15 ರೊಳಗಾಗಿ ಸಲ್ಲಿಸಬೇಕು ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಸಿರಿಧಾನ್ಯ ಬೆಳೆದ ರೈತರಿಗೆ ಸರ್ಕಾರ ಬೆಂಬಲ ಬೆಲೆ ನೀಡುತ್ತಿಲ್ಲ

» **ಹೊಸದುರ್ಗ**

ಕೃಷಿಕ ಈ ನಾಡಿನ ಬೇರು ಕೃಷಿಕರು ಅವರಿಗೆ ಸರಿಯಾದ ನೀರು ಗೊಬ್ಬರವನ್ನು ಒದಗಿಸಿದರೆ ಈ ನಾಡು ಸಮೃದ್ಧಿಯಿಂದ ಬೆಳಲು ಸಾಧ್ಯ. ಬಂದಿರುವ ನೋವುಗಳು ಆರ್ಥಿಕ ಸಾಮಾಜಿಕ ರಾಜಕೀಯ ಮೇಲೆ ಬಂದ ಹಾಗೆ ನಮ್ಮ ಮೂಲವನ್ನು ಮರೆಯುತ್ತಿದ್ದೇವೆ. ಏನನ್ನು ಮೂಲದಿಂದ ಬಂದ ಕ್ಷೇತ್ರಕ್ಕೆ ಏನನ್ನ ಮಾಡಬೇಕು ಎಂದು ಅರಿಯಬೇಕಿದೆ ಇತ್ತೀಚಿಗೆ ಹಲವು ಕೃಷಿಯ ಮೂಲಕ ತನ್ನ ಬದುಕನ್ನು ಸ್ವಾಮೀಜಿಗಳು ಆನಂದಮಯವಾಗಿ ಮಾಡಿಕೊಳ್ಳುತ್ತಿದ್ದಾರೆ ಆಸ್ತಿನಾ ಅಧಿಕಾರ ಆಸ್ತಿ ಇದರಲ್ಲಿ ಯಾವುದು ಬೇಕು ಎಂದಾಗ ಮೊದಲು ಆನಂದ ಬೇಕಾಗಿದೆ. ಆನಂದ ಸಂತೋಷವೆಂದು ದೂರವಾಗಿ ತುಂಬಾ ಬರಗಾಲ ಬಂದಂತಹ ಸಂದರ್ಭದಲ್ಲಿ ನಿಮ್ಮದೇ ಇಲ್ಲದಂತಾಗಿದೆಎಂದು ಪಂಡಿತರಧ್ಯ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು,

ತಾಲೂಕಿನ ಸಾಣೆಹಳ್ಳಿಯಲ್ಲಿ ನಡೆದ ರಾಷ್ಟ್ರೀಯ ನಾಟಕೋತ್ಸವದ ಮೂರನೇ ದಿನದ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು ನೀರಾವರಿ



ನಂಬಿದ ಕೃಷಿಕ ಒದ್ದಾಡುತ್ತಿದ್ದು ಮಳೆಯನ್ನ ನಂಬಿದ ರೈತ ನೆಮ್ಮದಿಯಿಂದ ಇದ್ದಾನೆ ರೈತನ ನೆಮ್ಮದಿಯ ಜೀವನದ ಮಿಶ್ರ ಬೆಳೆ ಪದ್ಧತಿ ದೂರವಾಗಿ ನಾವೆಲ್ಲ ಏಕ ಪದ್ಧತಿಗೆ ಬೆಳೆಗೆ ಗಂಟು ಬಿದ್ದಿದ್ದಾನೆ ಒಬ್ಬ ಹತ್ತಿ ಬೆಳೆದರೆ ಎಲ್ಲರೂ ಹತ್ತಿಯನ್ನೇ ಬೆಳೆಯುತ್ತಾರೆ ನಮಗೆ ಬೇಕಾಗಿರುವ ರೊಟ್ಟಿ ಮುದ್ದೆ ಅನ್ನ ಸಾಂಬಾರಿನ ಬೆಳೆಗಳನ್ನ ಬೆಳೆಯುದನ್ನೇ ನಿಲ್ಲಿಸಿದ್ದೇವೆ. ನಮಗೆ ಸಿಗುವ ಆದಾಯದ ಜೊತೆಗೆ ನಮ್ಮ ಜೀವನಕ್ಕೆ ಬೇಕಾದಷ್ಟು ಆಹಾರದ ಬೆಳೆಗಳನ್ನ ಬೆಳೆದುಕೊಳ್ಳಬೇಕು ತನಗೆ ಬೇಕಾದಂತಹ ಸಾಮಗ್ರಿಗಳನ್ನು ತಾನೇ ಬೆಳೆದುಕೊಂಡರೆ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು.ಪ್ರಸ್ತುತ ಆರ್ಥಿಕ ಸ್ಥಿತಿ ಸುಧಾರಣೆಯಾಗಿ ಆರೋಗ್ಯದ ಸ್ಥಿತಿ ಹದಗೆಡುತ್ತಿದೆ. ಸಿರಿಧಾನ್ಯಕ್ಕೆ ಹೆಸರಾದ ಹೊಸದುರ್ಗ ತಾಲೂಕಿನಲ್ಲಿ ಅತ್ಯುತ್ತಮವಾದ ಬೆಳೆ ಬಂದಿದ್ದು ಈ ಸಿರಿಧಾನ್ಯ ಬೆಳೆದ ರೈತರಿಗೆ ಸರ್ಕಾರ ಬೆಂಬಲ ಬೆಲೆ ನೀಡುತ್ತಿಲ್ಲ. ಸಿರಿಧಾನ್ಯ ಕೃಷಿಯಲ್ಲಿ ಆದಾಯಕ್ಕಿಂತ ಹೆಚ್ಚು ಖರ್ಚಾಗುತ್ತದೆ ಇದರಿಂದ ಮುಂದೆ ರೈತರು ಸಿರಿಧಾನ್ಯವನ್ನು ಬೆಳೆಯುವುದನ್ನೇ ನಿಲ್ಲಿಸುತ್ತಾರೆ. ಗುರು ಶಿಷ್ಯರ ನಡುವೆ ಸರಿಯಾದ ಬಾಂದವ್ಯವಿದ್ದರೆ ಪ್ರಗತಿ ಸಾಧ್ಯ, ಭಕ್ತರಿಗೆ ಅಂಜಿಂ ನಡೆಯುವ ಗುರು, ಗುರುವಿಗೆ ಅಂಜಿ ನಡೆಯುವ ಭಕ್ತ ಇದ್ದಾಗ ಮಾತ್ರ ಮಠ ಮತ್ತು ಸಮಾಜ ಎರಡು ಬೆಳೆಯುತ್ತವೆ ಎಂದರು. ಎಸ್ ಜೆ ಎಂ ಮಠದ ಆಡಳಿತ ಮಂಡಳಿ ಸದಸ್ಯರಾದ ಬಸವಕುಮಾರ ಸ್ವಾಮೀಜಿ ಮಾತನಾಡಿ ರಂಗಭೂಮಿಯನ್ನು ತಪ್ಪು ಭೂಮಿಯಾಗಿ ಪರಿವರ್ತನೆ ಮಾಡಿದವರು ಶಿವಕುಮಾರ ಸ್ವಾಮೀಜಿಯವರು. ತಿಂದ ಕುಡಿಯೋದಿಲ್ಲ ರಂಗಭೂಮಿ ಕೇವಲ ಕಲಾವಿದರಿಂದ ಕೂಡಿರುವುದಿಲ್ಲ ಅಂತನಿಂದಲೂ ಕೂಡಿದ್ದು ಎಂದು ಶಿವಕುಮಾರ ಶ್ರೀಗಳು ವಂದೇ ನಂಬಿದ್ದರು. ಶರಣರ ವಚನ ಮತ್ತು ತತ್ವಗಳನ್ನ ಮನಮುಟ್ಟುವ ರೀತಿಯಲ್ಲೆ ನಾಡಿಗೆ ತಿಳಿಸುವ ಕಾಯಕವನ್ನು ಮಾಡಿದ್ದರು. ಅದನ್ನ ಯತ ಹೊತ್ತಾಗಿ 1987ರಲ್ಲಿಶಿವಕುಮಾರ ಕಲಾಸಂಗ ಕಟ್ಟಿ 97 ರಲ್ಲಿ ಶಿವ ಸಂಚಾರವನ್ನು ಕಟ್ಟಿ ನಾಡಿನ ನಾಟಕ ರಂಗದಲ್ಲಿ ಕ್ರಾಂತಿಯನ್ನು ಮಾಡಿದವರು ಆಣೆ ಹಳ್ಳಿಯ ಪಂಡಿತರಾಧ್ಯ ಶ್ರೀಗಳು. ಸಿರಿಗೆರೆಯ ಶಿವಮೂರ್ತಿ ಶಿವಾಚಾರ್ಯ ಶ್ರೀಗಳು ಗ್ರಾಮ ಗ್ರಾಮಗಳ ಕೆರೆಕಟ್ಟೆಗಳಿಗೆ ನೀರು ತುಂಬಿಸುವ ಊರಿಗೆ ನೀರನ್ನು ನಾಡಿಗೆ ನಾಡಿನ ರೈತರಿಗೆ ನೀರು ಹರಿಸುವ ಕಾಯಕ ಮಾಡಿದರೆ ಪಂಡಿತಾರಾಧ್ಯ ಶ್ರೀಗಳು ರಂಗಭೂಮಿಯ ಮೂಲಕ ನಾಡಿನ ಜನರಿಗೆ ಮಾನಮಹದ ಮೌಲ್ಯವನ್ನು ಆರಿಸುವ ಕಾಯಕ ಮಾಡುತ್ತಿದ್ದಾರೆ.

# ಅಮ್ಮ ಎನ್ನುವ ಎರಡಕ್ಷರದಿ....




**ಮಾನವೀಯ ಸಂಭಂದಗಳಲ್ಲೇ ಅತ್ಯಂತ ಭಾವುಕ ಬಂಧನವೇ ಅಮ್ಮಾ.**

**ದೇವರ ನಂತರ ಅತಿಹೆಚ್ಚು ತೀವ್ರತೆಗೆ, ಭ್ರಮೆಗಳಗೆ ಒಳಗಾದವಳು ಅಮ್ಮಾ.**

**ಅಕ್ಕ, ತಂಗಿ, ಪ್ರೇಯಸಿ, ಹೆಂಡತಿ,, ಅತ್ತಿಗೆ, ಮಗಳು ಇತ್ಯಾದಿ ಎಲ್ಲಕ್ಕಿಂತ,**

**ಹೆಚ್ಚಾಗಿ ಗೌರವಿಸಲ್ಪಡುವವಳು**

## ಅಮ್ಮಾ

ಅಮ್ಮಾ ಎಂಬ ಸ್ಥಿತಿಯೇ ಹೆಣ್ಣಿಗೆ ಪವಿತ್ರ, ಪೂಜನೀಯ ಸ್ಥಾನ ಕಲ್ಪಿಸಿದೆ.

ತಾಯಿನಾಡು, ತಾಯಿನುಡಿ, ತಾಯಿಯೇ ಮೊದಲ ಗುರು, ತಾಯಿ ಹೃದಯ, ತಾಯಿ ಕರುಳು ಈ ಮಾತುಗಳೇ ಅಮ್ಮನನ್ನು ಆರಾಧನಾ ಭಾವದೊಂದಿಗೆ ದೈವತ್ವಕ್ಕೇರಿಸಿದೆ.

ಪತ್ರಿಕೆಗಳು, ಟಿವಿಗಳು, ಸಾಮಾಜಿಕ ಜಾಲತಾಣಗಳು, ಸಾಹಿತ್ಯ, ಸಿನಿಮಾ, ಮನರಂಜನೆ ಇತ್ಯಾದಿ ಮಾಧ್ಯಮಗಳಲ್ಲಿ,

ಅಮ್ಮನ ಬಗೆಗಿನ ವಿವರಣೆಗಳಲ್ಲಿ, ಪಾತ್ರ ಪೋಷಣೆಯಲ್ಲಿ ಭಾವತೀವ್ರತೆ ಉಕ್ಕಿ ಹರಿಯುತ್ತದೆ.

ಅಮ್ಮ.........

ಜೀವಿಯ ಅಸ್ತಿತ್ವದ ಮೊದಲ ಎಳೆ ಪ್ರಾರಂಭವಾಗುವುದೇ ತಾಯಿ ಹೊಟ್ಟೆಯಲ್ಲಿ – ಗರ್ಭದಲ್ಲಿ.

ಮನುಷ್ಯ ಜೀವಿಗಳಲ್ಲಿ ಸರಿಸುಮಾರು 9 ತಿಂಗಳು ಜೀವಕ್ಕೆ ಆಶ್ರಯ ನೀಡುವುದು ತಾಯ ಹೊಟ್ಟೆ. ತನ್ನ ಕರುಳ ಬಳ್ಳಿಯ ಮುಖಾಂತರವೇ ನಮ್ಮನ್ನು ಪೋಷಿಸುತ್ತಾಳೆ. ಇದೊಂದು ಪ್ರಕೃತಿಯ ಸಹಜ ಕ್ರಿಯೆ ಮತ್ತು ವಿಸ್ಮಯ.ಇದು ಅಮ್ಮನ ಶ್ರೇಷ್ಠತೆಯನ್ನು ಎತ್ತಿಹಿಡಿಯುತ್ತದೆ.

ನಂತರ ಕರುಳು ಬಳ್ಳಿಯ ಕತ್ತರಿಸುವಿಕೆಯಿಂದ ಹೊರಬರುವ ಮಗು ತಾಯಿಗೆ ತನ್ನದೇ ದೇಹದ ವಿಸ್ತೃತ ಅಂಗ ಮತ್ತು ತನ್ನ ದೀರ್ಘ ನೋವಿನ ಪ್ರತಿಫಲ ಎಂಬಂತೆ ಭಾಸವಾಗುತ್ತದೆ. ಇಲ್ಲಿಂದ ಮುಂದೆ ತಾಯಿ ಮಗುವಿನ ಸಂಬಂಧದ ತೀವ್ರತೆಯ ಪ್ರಕ್ರಿಯೆ ವಾಸ್ತವದ ರೂಪ ಪಡೆಯುತ್ತದೆ.

ಹುಟ್ಟಿನಿಂದ ಕೆಲವು ತಿಂಗಳುಗಳವರೆಗೂ ಮಗುವಿಗೆ ತಾಯಿಯಲ್ಲದೆ ಬೇರೆ ಸಂಬಂಧದ ಅರಿವೇ ಇರುವುದಿಲ್ಲ. ಎಲ್ಲಕ್ಕೂ ತಾಯಿಯನ್ನು ಅವಲಂಬಿಸಿ ಚಡಪಡಿಸುತ್ತದೆ. ಆ ಚಡಪಡಿಸುವಿಕೆಯ ಕ್ಷಣಗಳೇ ತಾಯಿಗೆ ಮಗುವಿನ ಮೇಲಿನ ಪ್ರೀತಿ ಆಳವಾಗುತ್ತಾ ಹೋಗುತ್ತದೆ. ತಾಯಿಗೂ ಮಗುವಿಗೆ ತನ್ನ ಅನಿವಾರ್ಯತೆ ಮತ್ತು ತನ್ನನ್ನು ಪ್ರಾಣದಷ್ಟೇ ಪ್ರೀತಿಸುವ ಪುಟ್ಟ ಹೃದಯ ಒಂದಿದೆ ಎಂಬ ಭಾವ ಅಂತರ್ಗತವಾಗುತ್ತದೆ.

ಅಲ್ಲಿ ಮಗುವಿಗೂ ಅಮ್ಮ ಎಂಬ ಭಾವ ಚಿರಸ್ಥಾಯಿಯಾಗುತ್ತದೆ.

ತದನಂತರ ಅಪ್ಪ ಅಣ್ಣ ಅಕ್ಕ ಅಜ್ಜ ಅಜ್ಜಿ ಮುಂತಾದ ವ್ಯಕ್ತಿಗಳ ಪ್ರವೇಶವಾದರೂ ತನ್ನ ಬೇಕು ಬೇಡಗಳಿಗೆ ಸ್ಪಂದಿಸುವ – ತಾಯ ದೇಹದ ಅಪ್ಪುಗೆಯೊಂದಿಗೇ ಕಳೆಯುವ ಮಗುವಿಗೆ ತಾಯ ಮಹತ್ವ ಅರಿವಾಗುತ್ತದೆ.

ಪುಟ್ಟ ಕಂದನ ಸಹಜ ಬೆಳವಣಿಗೆ – ಮುಗ್ದ ಚಟುವಟಿಕೆಗಳು ತಾಯಿಯ ಪ್ರೀತಿ – ಹೃದಯದಿಂದ ಮೆದುಳನ್ನೂ ಆಕ್ರಮಿಸುತ್ತದೆ. ಹಾಗೆಯೇ ಮಗುವಿನ ರಕ್ತದ ಪ್ರತಿ ಕಣಕಣದಲ್ಲೂ ಪ್ರತಿ ಉಸಿರಿನಲ್ಲೂ ಅಮ್ಮ ಐಕ್ಯವಾಗುತ್ತಾಳೆ. ಪ್ರೀತಿಯ ಪರಾಕಾಷ್ಠೆ ಮುಟ್ಟುತ್ತದೆ.

ಮುಂದೆ.....,

ಪ್ರೀತಿ ಎಂಬ ಭಾವದಲ್ಲಿ ಸ್ವಾರ್ಥ – ತ್ಯಾಗ – ಅಸೂಯೆ – ದ್ವೇಷ – ಕೋಪ – ಅಭದ್ರತೆ – ಅವಶ್ಯಕತೆ – ಅನಿವಾರ್ಯತೆ, ಅವಲಂಬನೆ ಇತ್ಯಾದಿ ಭಾವಗಳೂ ಪರೋಕ್ಷವಾಗಿ ಅಂತರ್ಗತವಾಗಿರುತ್ತವೆ.

ತಾಯಿ ಪ್ರೀತಿ ಬಹುತೇಕ ಸಂದರ್ಭಗಳಲ್ಲಿ ಸ್ವಾರ್ಥವಾಗಿ ಪರಿವರ್ತನೆ ಹೊಂದುವುದನ್ನು ಗಮನಿಸಬಹುದು. ಮಗು ನನ್ನದು ನಾನೇ ಸೃಷ್ಟಿಸಿದ್ದು ಅದರ ಮೇಲೆ ನನ್ನದೇ ನಿಯಂತ್ರಣ ಎಂಬ ಸ್ವಾರ್ಥ ಭಾವ ಬಲವಾಗುತ್ತಾ ಹೋಗುತ್ತದೆ. ಅದಕ್ಕೆ ತಂದೆ ಎಂಬ ಸಂಬಂಧವೂ ಪೂರಕವಾಗಿರುತ್ತದೆ.

ಯೌವನಕ್ಕೆ ಕಾಲಿಡುವ ಮಗು ಸ್ವಾತಂತ್ರ್ಯವನ್ನು ಬಯಸಲು ಪ್ರಾರಂಭಿಸಿದರೆ ತಾಯಿ ತಂದೆ ಅದಕ್ಕೆ ವಿರುದ್ಧವಾಗಿ ನಿಯಂತ್ರಣ ಹೊಂದಲು ಬಯಸುತ್ತಾರೆ.



ಈ ಘರ್ಷಣೆ ಹಳೆಯ ಕಾಲದ ಸರಳ ಸಮಾಜದಲ್ಲಿ ಹೆಚ್ಚಿನ ಸಂಘರ್ಷವಿಲ್ಲದೆ ಮುಗಿದು ಹೋಗುತ್ತಿತ್ತು. ಆದರೆ ಇಂದಿನ ಆಧುನಿಕ ಸಂಕೀರ್ಣ ವ್ಯವಸ್ಥೆಯಲ್ಲಿ ಇದು ವೈಯಕ್ತಿಕತೆಯನ್ನೂ ಮೀರಿ ಸಾಮಾಜಿಕ ಸಂಘರ್ಷವಾಗಿ ಪರಿವರ್ತನೆ ಹೊಂದಿದೆ.

ಮುಖ್ಯವಾಗಿ ಅತ್ತೆ ಸೊಸೆ ಎಂಬ ಕೌಟುಂಬಿಕ ವ್ಯವಸ್ಥೆ ತಾಯಿಯ ಈ ಸ್ವಾರ್ಥದ ಕಾರಣಕ್ಕಾಗಿಯೇ ಹೆಚ್ಚಾಗಿ ಶಿಥಿಲಗೊಳ್ಳುತ್ತಿದೆ. ಮಗು ನನ್ನಂತೆ ಸೃಷ್ಟಿಯ ಸಹಜ ಸ್ವತಂತ್ರ ಜೀವಿ. ಅದು ಬೆಳೆದ ಒಂದು ಹಂತದ ನಂತರ ತಾಯಿ ನಾನೇ ಆದರೂ ಅದಕ್ಕೂ ಒಂದು ಸ್ವತಂತ್ರ ವ್ಯಕ್ತಿತ್ವ ರೂಪಗೊಳ್ಳುತ್ತದೆ ಎಂದು ಅಮ್ಮ ಭಾವಿಸುವುದು ಕಡಿಮೆಯಾಗುತ್ತಿದೆ.

ನಾವು ವಾಸಿಸುತ್ತಿರುವ ಈ ಸಮಾಜದ ಸುತ್ತಮುತ್ತಲಿನ ಪ್ರಪಂಚದ ದೈನಂದಿನಚಟುವಟಿಕೆಗಳಲ್ಲಿ , ಸಂಬಂದಗಳಲ್ಲಿ ಈ ಭಾವ ತೀವ್ರತೆ ಆತ್ಮವಂಚನೆಯ ರೀತಿ ಕಾಣುತ್ತದೆ.

ವಾಸ್ತವದಲ್ಲಿ ನಮ್ಮ ಅತ್ಯಂತ ಜೀವನಾವಶ್ಯಕ ಪ್ರತಿನಿತ್ಯದ ಊಟ, ತಿಂಡಿ ಇತ್ಯಾದಿ ಬೇಡಿಕೆಗಳನ್ನು ಪೂರೈಸಲು ಅಮ್ಮ ಅನಿವಾರ್ಯ.ನಮ್ಮ ಮನೆ ನೋಡಿಕೊಳ್ಳಲು, ಮಕ್ಕಳನ್ನು ಪೋಷಿಸಲು, ಪುರುಷ ಪ್ರಧಾನ ಕುಟುಂಬಗಳಲ್ಲಿ,

ಅಮ್ಮ ಅತ್ಯವಶ್ಯಕ.

ಅಪ್ಪನ ಹೊರ ದುಡಿತ, ಬೇರೆಯವರ ನಿರ್ಲಕ್ಷ್ಯ, ಆಕೆಯ ಮೇಲಿನ ಅವಲಂಬನೆ, ಅಮ್ಮನ ಅತಿ ಪ್ರೀತಿ,

ಎಳವೆಯಲ್ಲೇ ನಮಗೆ ಅತ್ಯಮೂಲ್ಯವೆನಿಸುತ್ತದೆ.

ಆ ಕಾರಣಕ್ಕಾಗಿಯೇ ಆಕೆಯ ಮೇಲಿನ ಗೌರವ, ಭಕ್ತಿ, ನಂಬಿಕೆ, ಅಮ್ಮನನ್ನು ದೈವತ್ವಕ್ಕೇರಿಸುತ್ತದೆ ಮತ್ತು ಅದೇ ಆಕೆಯ ಶೋಷಣೆಯ ಮೂಲವೂ ಆಗುತ್ತದೆ.

ಆಕೆಯ ಸ್ವಾತಂತ್ರ್ಯದ ಹರಣವೂ ಆಗುತ್ತದೆ. ಆಕೆಗೆ ಸೇವಕಿಯ ಸ್ಥಾನವೂ ದೊರೆಯುತ್ತದೆ. ಆಕೆಯ ಮೇಲೆ ನಿಯಂತ್ರಣವೂ ತೀವ್ರವಾಗುತ್ತದೆ.

ಹಣವಂತರ ಮನೆಗಳಲ್ಲಿ ದುಡ್ಡಿನ ಕಾರಣಕ್ಕೆ ಸ್ವಲ್ಪ ಉತ್ತಮ ಸ್ಥಾನ ದೊರೆಯಬಹುದು. ಆದರೆ ಮಧ್ಯಮ ಮತ್ತು ಬಡ ಕುಟುಂಬಗಳಲ್ಲಿ, ಈ ಆತ್ಮವಂಚನೆ ಸಹಜವೆಂಬಂತೆ ನಡೆಯುತ್ತದೆ.

ಆಕೆಯ ಇನ್ನೊಂದು ಲಕ್ಷಣವೆಂದರೆ,

ಅಮ್ಮ ಸ್ವಾರ್ಥದ, ಸಣ್ಣತನದ, ಅಜ್ಞಾನದ, ಅಸಮಾನತೆಯ, ಸಾಮಾಜಿಕ ಅಸ್ವಾಸ್ಥ್ಯತೆಯ, ಬದಲಾವಣೆ ಬಯಸದ ,ಕೆಲವೊಮ್ಮೆ ಭಾವುಕತೆಯ ಬ್ಲಾಕ್ ಮೇಲಿನ ಜನಕಳೂ ಹೌದು. ಎಷ್ಟೋ ಮಕ್ಕಳು ದಾರಿ ತಪ್ಪಲು ಅಮ್ಮ ಕಾರಣ ಎಂಬ ಆರೋಪವೂ ಇದೆ.

ಇಂದು ವ್ಯವಸ್ಥೆಯ ಶಿಥಿಲತೆಗೆ ಅಮ್ಮನ ಕೊಡುಗೆಯೂ ಗಮನಾರ್ಹವಾಗಿದೆ.

ಎಲ್ಲಾ ಅಮ್ಮಂದಿರೂ ಶ್ರೇಷ್ಠರಾಗಿದ್ದರೆ ಇಂದು ವ್ಯವಸ್ಥೆಯ ನರಳಾಟ ಇಷ್ಟೊಂದು ಇರುತ್ತಿರಲಿಲ್ಲ. ತಮ್ಮ ತಂದೆಯ, ತಮ್ಮ ಗಂಡನ, ತಮ್ಮ ಮಕ್ಕಳ ತಪ್ಪುಗಳನ್ನು, ಭ್ರಷ್ಟತೆಯನ್ನು ಆಕೆ ಸ್ವಾರ್ಥದಿಂದ ಅಜ್ಞಾನದಿಂದ ಎಲ್ಲವನ್ನೂ ಸಮರ್ಥಿಸುತ್ತಾಳೆ. ಅದಕ್ಕೆ ಸ್ವಲ್ಪ ಮಟ್ಟಿಗೆ ನಾವು ರೂಪಿಸಿರುವ ಅಮ್ಮನ ವ್ಯಕ್ತಿತ್ವದ ವ್ಯವಸ್ಥೆಯೂ ಕಾರಣವಾಗಿದೆ.

ಎಲ್ಲಾ ಸಂಬಂದಗಳು ಮೌಲ್ಯವನ್ನು ಕಳೆದುಕೊಳ್ಳುತ್ತಿರುವ ಈ ಸಂದರ್ಭದಲ್ಲಿ,ಅಮ್ಮನ ಮೌಲ್ಯವೂ ಶಿಥಿಲಗೊಳ್ಳುತ್ತಿದೆ.

ಆಕೆಯನ್ನು ಕುರುಡಾಗಿ, ಆರಾಧನಾಪೂರ್ವಕವಾಗಿ,

ನೋಡುವುದಕ್ಕಿಂತ, ವಾಸ್ತವ ನೆಲೆಯಲ್ಲಿ ಆತ್ಮಾವಲೋಕನ ಮಾಡಿಕೊಳ್ಳೋಣ.

ಅತ್ಯಂತ ಅವಶ್ಯಕ

ಈ ಸಂಬಂದವನ್ನು ನಾವು ನಿಂತ ನೀರಾಗಲು ಬಿಡದೆ, ಆಧುನಿಕತೆಯ ನೆರಳಿನಲ್ಲಿ, ಮತ್ತೆ ಮತ್ತೆ ಪುನರ್ ರೂಪಿಸಿಕೊಳ್ಳಬೇಕಿದೆ. ಆ ಕಳಕಳಿಯೇ ನಮ್ಮ ಆಶಯ.

ನಿಮ್ಮ ಮನಸ್ಸಿಗೆ ನೋವಾಗಿರುತ್ತದೆ. ಆದರೂ ಕ್ಷಮಿಸಿ. ಸತ್ಯ ಸ್ವಲ್ಪ ಕಹಿ.

ಏಕೆಂದರೆ,

ಏನೇ ವಿವರಣೆಗಳನ್ನು ನೀಡಿದರೂ,

ಇದೊಂದು ಅರಿವಿನ ತೊಳಲಾಟ,

ವಾಸ್ತವದ ಹುಡುಕಾಟ,

ಅವಶ್ಯಕತೆ ಮತ್ತು ಅನಿವಾರ್ಯಗಳ ನಡುವಿನ ಜೊತೆಯಾಟ, ಮತ್ತೆ ಮತ್ತೆ ಅದೇ ಪದಗಳು ವಾಕ್ಯಗಳು ಅರ್ಥಗಳು ಭಾವಗಳು ಪುನರಾವರ್ತನೆಯಾಗುತ್ತದೆ.

ಸಮಾಜದ ಶಾಂತಿಯ ದೃಷ್ಟಿಯಿಂದ ಅಮ್ಮ ಇನ್ನಷ್ಟು ಜವಾಬ್ದಾರಿ ಹೊಂದಲಿ ಇನ್ನಷ್ಟು ಹೆಚ್ಚು ಪ್ರಬುದ್ದವಾಗಲಿ...

ಇದು ಒಂದು ಅಭಿಪ್ರಾಯ ಮಾತ್ರ. ಪ್ರತಿಕ್ಷಣವೂ ಆಕೆಯ ಒಳಿತನ್ನೇ ನಮ್ಮೆಲ್ಲರ ಮನಸ್ಸು ಬಯಸುತ್ತದೆ.

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ.



■ ಲೇಖನ
ವಿವೇಕಾನಂದ.
ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T